ಸಂಪುಟ : 9 ಸಂಚಿಕೆ 36 ಪುಟ : 4 ಬೆಲೆ: 3.00 ಗುರುವಾರ ಮಾರ್ಚ್ 7, 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 9 Issue : 36 Pages : 4 Price : 3.00 Thursday March 7 2024 Gadag RNI No:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

ಇಂದಿನ ನೀರು ಪೂರೈಕೆ ವಿವರ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ–ಬೆಟಗೇರಿ ಅವಳಿ ನಗರದಲ್ಲಿ ಮಾರ್ಚ್–07ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು.

ಸ್ಥಳಗಳ ವಿವರ ವಾರ್ಡ್ ನಂ. 21, 23, 20, 19 ಜಂಟ್ಲಿಯವರ ಓಣಿ, ಕುಂಬಾರ ಓಣಿ, ಪಡಗದ ಭಾಗ–1, 2, ಚಿನ್ನೂರ ಲೈನ್, ಬೇವಿನ ಮರದಮ್ಮ ಎಸ್ ಟಿ ಡಿ, ಕೊಟ್ಟೂರ ಲೈನ್, ಹುಲಿಗೆಮ್ಮನ ಗುಡಿ, ಕೆರಕಲಮಟ್ಟಿ, ಸಿ ಟಿ ಹಾಲ್ ಭಾಗ–1,2, ಹಾಳದಿಬ್ಬ, ಪಲ್ಲೇದರ ಲೈನ್, 2 ನಂಬರ್ ಶಾಲೆ, ಕಲಬಂಡಿಯವರ ಲೈನ್, ಖಾನತೋಟ, ಶರೀಫಜ್ಜನ ಗದ್ದುಗೆ.

ವಾರ್ಡ್ ನಂ. 22 ಅಪಾರ್ಟ್ಮೆಂಟ್, ದೊಡ್ಡ ಮಸೂತಿ ಭಾಗಗಳು. ವಾರ್ಡ್ ನಂ. 7, 5 ಪಂಚ ಲಕ್ಷ್ಮೀ ಬಡಾವಣೆ 4 ಭಾಗಗಳು, ರಂಗಪ್ಪಜ್ಜನ ಮಠ 3ನೇ ಬ್ಯಾಚ್, ವಾರ್ಡ್ ನಂ. 3, 4 ಮಿಷನ್ ಕಾಂಪೌಂಡ್ ಭಾಗ–1,2, ಬಣ್ಣದ ನಗರ, ಕುಂಬಾರ ಓಣಿ, ಮಾಧುಸಾ ಮೆಂಬರ್ ಮನೆ ಲೈನ್, ರಾಜಾಜಿ ನಗರ ರೋಡ್, ಅಯ್ಯಪ್ಪನ ಗದ್ದುಗೆ, ಕೊಯಿಲಗೋಳ ರಸ್ತೆ ಭಾಗ–1,2,3,4, ಟರ್ನಲ್ ಪೇಟೆ 200 ಮನೆ, 270 ಮನೆ, ಕಣವಿ ಪ್ಲಾಟ್ ಬಿ ಏಸ್ ಎನ್ ಎಲ್ ಆಫೀಸ್ ಹಿಂದಿನ ಭಾಗಗಳು, ಬ್ಯಾಳಿಯವರ ಲೈನ್, ಮಾಜಿ ಮೆಂಬರ್ ಲೈನ್, ಸುಣ್ಣದ ಬಟ್ಟಿ ಲೈನ್, ಮಂಜುನಾಥ ನಗರ, ಮಲ್ಲಪ್ಪನ ಬಡಾವಣೆ, ಗೌರಿಗುಡಿ.

ವಿಶೇಷ ಸೂಚನೆ : ಗದಗ–ಬೆಟಗೇರಿ ನಗರಸಭೆಯ ವ್ಯಾಪ್ತಿಯಲ್ಲಿ ನೀರಿನ ಪೂರೈಕೆಯಲ್ಲಿ ಯಾವುದೇ ತೊಂದರೆ ಉಂಟಾದಲ್ಲಿ ಕಾರ್ಯಾಲಯದ ಸಹಾಯವಾಣಿ ಸಂಖ್ಯೆ:08372–278504ಗೆ ಕರೆಮಾಡಿ ತಮ್ಮ ದೂರನ್ನು ದಾಖಲಿಸಬಹುದಾಗಿದೆ. ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬರಗಾಲ: ಸಹಾಯವಾಣಿ ಆರಂಭ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಕುಡಿಯುವ ನೀರಿನ ಪೂರೈಕೆ ಸೇರಿದಂತೆ ಸಾರ್ವಜನಿಕರಿಗಾಗಿ ಸಹಾಯವಾಣಿಗಳನ್ನು ತಾಲೂಕಾವಾರು ಆರಂಭಿಸಲಾಗಿದೆ ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಅವರು ತಿಳಿಸಿದ್ದಾರೆ. ತಾಲೂಕಾವಾರು ಸಹಾಯವಾಣಿ ಸಂಖ್ಯೆಗಳು ಇಂತಿವೆ: ಜಿಲ್ಲಾಧಿಕಾರಿಗಳ ಕಚೇರಿ– 08372–239177 ; ಗದಗ–08372 250009 ; ಗಜೇಂದ್ರಗಡ – 08381–262131 ; ಲಕ್ಷ್ಮೇಶ್ವರ– 08487–273272 ; ಮುಂಡರಗಿ– 08371–262237 ; ನರಗುಂದ–08377– 245243 ; ರೋಣ– 08381–267239 ; ಶಿರಹಟ್ಟಿ– 08487– 242100. ಸಾರ್ವಜನಿಕರು ಸಹಾಯವಾಣಿಯ ಸದುಪಯೋಗಪಡಿಸಿಕೊಳ್ಳಬೇಕೆಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಕೋರಿದ್ದಾರೆ.

ನಗರಸಭೆ ಪೌರಾಯುಕ್ತರಾಗಿ ರುದ್ರಮುನಿ ನೇಮಕ

■ ವಿಜಯಸಾಕ್ಷಿ ಸುದ್ದಿ, ಗದಗ

ಕಳೆದ ಹಲವು ತಿಂಗಳಿಂದ ಖಾಯಂ ಪೌರಾಯುಕ್ತರಿಲ್ಲದೇ ಪ್ರಭಾರಿಗಳ ಉಸ್ತುವಾರಿಯಲ್ಲಿ ಕಾರ್ಯಭಾರ ನಡೆಸುತ್ತಿದ್ದ ನಗರಸಭೆಗೆ ಕೊನೆಗೂ ಸರಕಾರ ಪೌರಾಯುಕ್ತರ ನೇಮಕ ಮಾಡಿ ಬುಧವಾರ ಸಂಜೆ ಆದೇಶ ಹೊರಡಿಸಿದೆ. ಬೆಂಗಳೂರಿನ ಪೌರಾಡಳಿತ ನಿರ್ದೇಶನಾಲಯದ ಜಂಟಿ ನಿರ್ದೇಶಕರಾಗಿದ್ದ (ಅಭಿವೃದ್ಧಿ) ಬಿ.ಕೆ ರುದ್ರಮುನಿ ಅವರನ್ನು ಗದಗ–ಬೆಟಗೇರಿ ನಗರಸಭೆ ಪೌರಾಯುಕ್ತರನ್ನಾಗಿ ನೇಮಿಸಿ ನಗರಾಭಿವೃದ್ಧಿ ಇಲಾಖೆಯ ಸರಕಾರದ ಅಧೀನ ಕಾರ್ಯದರ್ಶಿ ಟಿ.ಮಂಜುನಾಥ್ ಆದೇಶ ಹೊರಡಿಸಿದ್ದಾರೆ. ಈ ಹಿಂದಿನ ನಗರಸಭೆ ಪೌರಾಯುಕ್ತರಾಗಿದ್ದ ರಮೇಶ್ ಸುಣಗಾರ ಅವರ ನಿವೃತ್ತಿಯಿಂದ ಖಾಯಂ ಪೌರಾಯುಕ್ತರ ನೇಮಕವಾಗಿರಲಿಲ್ಲ. ಇದೀಗ ಬಿ.ಕೆ.ರುದ್ರಮುನಿ ಅವರನ್ನು ಪೌರಾಯುಕ್ತರನ್ನಾಗಿ ನೇಮಕ ಮಾಡಲಾಗಿದೆ.

ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ 4ನೇ ಘಟಿಕೋತ್ಸವದಲ್ಲಿ ರಾಜ್ಯಪಾಲರು

ಶಿಕ್ಷಣದೊಂದಿಗೆ ಉದ್ಯೋಗ ವ್ಯವಸ್ಥೆ ಬಲಗೊಳ್ಳಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಹಳ್ಳಿಗಳನ್ನು ಸ್ವಾವಲಂಬಿ ಮತ್ತು ಸುಸಜ್ಜಿತವಾಗಿ ಮಾಡದಿದ್ದರೆ, ದೇಶದ ಸರಿಯಾದ ಮತ್ತು ಸಮತೋಲಿತ ಅಭಿವೃದ್ಧಿ ಸಾಧ್ಯವಿಲ್ಲ ಎಂಬುದು ಸಾರ್ವತ್ರಿಕವಾಗಿ ಒಪ್ಪಿಕೊಂಡ ಸತ್ಯ. ಶಿಕ್ಷಣ, ಕೃಷಿ ಮತ್ತು ಇತರ ಉದ್ಯೋಗ ಸಂಬಂಧಿತ ಕೆಲಸಗಳನ್ನು ಗ್ರಾಮ ಮಟ್ಟದಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ಮೂಲಕ ಪ್ರತಿಯೊಂದು ಗ್ರಾಮ ಅಭಿವೃದ್ಧಿ ಹೊಂದಿದರೆ ಮಾತ್ರ ದೇಶದ ಅಭಿವೃದ್ಧಿ ಸಾಧ್ಯ ಎಂದು ಕರ್ನಾಟಕದ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಅಭಿಪ್ರಾಯಪಟ್ಟರು.

ಬುಧವಾರ ನಡೆದ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ 4ನೇ ಘಟಿಕೋತ್ಸವದಲ್ಲಿ ಭಾಗವಹಿಸಿ, ಅವರು ಮಾತನಾಡಿದರು.

ಗ್ರಾಮೀಣ ಅಭಿವೃದ್ಧಿಗಾಗಿ, ಪಂಚಾಯತ್ ರಾಜ್, ಶಿಕ್ಷಣ, ಕೃಷಿ ಮತ್ತು ಇತರ ಉದ್ಯೋಗ ಸಂಬಂಧಿತ ಕೆಲಸಗಳನ್ನು ಗ್ರಾಮ ಮಟ್ಟದಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವುದು ಬಹಳ ಮುಖ್ಯ.

ಪಂಚಾಯತ್ ರಾಜ್ ವ್ಯವಸ್ಥೆಯು ಭಾರತೀಯ ದೃಷ್ಟಿಕೋನದಿಂದ ಬಹಳ ಪ್ರಾಚೀನ ಕಲ್ಪನೆಯಾಗಿದೆ. ನಮ್ಮ ಮೂರು ಹಂತದ ಆಡಳಿತ ವ್ಯವಸ್ಥೆಯಲ್ಲಿ, ಕೇಂದ್ರ ಮತ್ತು ರಾಜ್ಯ ಸರ್ಕಾರದ ಜೊತೆಗೆ ಸ್ಥಳೀಯ ಆಡಳಿತದ ಘಟಕವಾಗಿ ಪಂಚಾಯತ್ ರಾಜ್ ವ್ಯವಸ್ಥೆಯ ಪ್ರಾಮುಖ್ಯತೆಯನ್ನು ಅರ್ಥಮಾಡಿಕೊಂಡಿದ್ದೇವೆ. ಸಾಂವಿಧಾನಿಕ ತಿದ್ದುಪಡಿಯ ಮೂಲಕ, ಪಂಚಾಯತ್ ರಾಜ್ ವ್ಯವಸ್ಥೆಗೆ ಸಮಗ್ರ ಅಧಿಕಾರವನ್ನು ನೀಡುವ ಮೂಲಕ ಈ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸಲು ಕೆಲಸ ಮಾಡಲಾಗಿದೆ ಎಂದು ತಿಳಿಸಿದರು.

ಗ್ರಾಮೀಣ ಪ್ರದೇಶಗಳಿಂದ ನಗರ ಪ್ರದೇಶಗಳಿಗೆ ಯುವಜನರ ವಲಸೆಯು ಗಂಭೀರ ಸಮಸ್ಯೆಯಾಗಿದೆ. ಹಳ್ಳಿಗಳ ಅಭಿವೃದ್ಧಿಯಾಗಬೇಕೆಂದರೆ, ಈ ವಲಸೆ ಹೋಗುವುದು ಒಳ್ಳೆಯದಲ್ಲ.

▸▸ 3ನೇ ಪುಟಕ್ಕೆ

ದೇಶದ ಹಿತಕ್ಕಾಗಿ ಪಂಚಾಯತ್ ರಾಜ್ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸಬೇಕು. ಪ್ರಾಚೀನ ಕಾಲದಲ್ಲಿ ಹಳ್ಳಿಗಳಲ್ಲಿ ಮುಖಂಡರ ನೇತೃತ್ವದಲ್ಲಿ ನ್ಯಾಯ ಒದಗಿಸಿ ಸಮಸ್ಯೆ ಇತ್ಯರ್ಥಪಡಿಸುತ್ತಿದ್ದರು. ಈಗಲೂ ಕೆಲವು ಗ್ರಾಮಗಳಲ್ಲಿ ಈ ವ್ಯವಸ್ಥೆ ಮುಂದುವರೆದಿದೆ. ಗ್ರಾಮದಲ್ಲಿ ಇರುವ ಯಾವೊಬ್ಬ ವ್ಯಕ್ತಿಯೂ ಶಿಕ್ಷಣದಿಂದ ವಂಚಿತರಾಗಬಾರದು. ಶಿಕ್ಷಣದ ಜೊತೆ ಜೊತೆಗೆ ಉದ್ಯೋಗ ಕಲ್ಪಿಸುವ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸಬೇಕು. ಹಿಂದಿನ ಕಾಲದಲ್ಲಿ ಬಡವರ ಕಲ್ಯಾಣಕ್ಕಾಗಿ ಅಂತ್ಯೋದಯ ಕಾರ್ಯಕ್ರಮವಿತ್ತು. ಈ ರೀತಿಯ ಕಾರ್ಯಕ್ರಮಗಳು ಪ್ರಸ್ತುತ ದಿನಗಳಲ್ಲಿ ಅವಶ್ಯಕವಾಗಿದೆ.

– ಥಾವರ್ ಚಂದ್ ಗೆಹ್ಲೋಟ್.
ಕರ್ನಾಟಕದ ರಾಜ್ಯಪಾಲರು.

ಚಿರಂಜೀವ್ ಸಿಂಗ್, ಸಿ. ನಾರಾಯಣಸ್ವಾಮಿ ಅವರಿಗೆ ಡಾಕ್ಟರೇಟ್ ಪದವಿ ಪ್ರದಾನ

ಸ್ನಾತಕೋತ್ತರ ಸಾಧಕರಿಗೆ ಚಿನ್ನದ ಪದಕ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕದ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ 4ನೇ ಘಟಿಕೋತ್ಸವದ ಸಮಾರಂಭದಲ್ಲಿ ಚಿರಂಜೀವ್ ಸಿಂಗ್ ಹಾಗೂ ಸಿ. ನಾರಾಯಣಸ್ವಾಮಿ ಅವರಿಗೆ 'ಗ್ರಾಮೀಣಾಭಿವೃದ್ಧಿ ಚೇತನ' ಬಿರುದು ನೀಡಿ ಡಾ–ಕ್ಟರೇಟ್ ಪದವಿ ಪ್ರದಾನ ಮಾಡಲಾಯಿತು.

ಪಂಜಾಬ್ ಪ್ರಾಂತದಿಂದ ಕರ್ನಾಟಕಕ್ಕೆ ಆಗಮಿಸಿ ಕನ್ನಡ ಭಾಷೆ, ಸಂಸ್ಕೃತಿ, ಆಚಾರ–ವಿಚಾರಗಳನ್ನು ಅಳವಡಿಸಿಕೊಂಡು ಅಚ್ಚ ಕನ್ನಡಿಗರಾಗಿ ಸಾರ್ಥಕ ಜೀವನ ನಡೆಸಿಕೊಂಡು ಬಂದಿರುವ ಐಎಎಸ್ ಅಧಿಕಾರಿ ಚಿರಂಜೀವ್ ಸಿಂಗ್ ಅವರಿಗೆ ಡಾಕ್ಟರ್ ಆಫ್ ಲಿಟರೇಚರ್ (ಡಿ.ಲಿಟ್) ಗೌರವ ಪದವಿ ಹಾಗೂ ಸಹಕಾರ ಗ್ರಾಮೀಣ ಅಭಿವೃದ್ಧಿ ಕ್ಷೇತ್ರಗಳಲ್ಲಿ ಹಾಗೂ ಪಂಚಾಯತ್ ರಾಜ್ ವ್ಯವಸ್ಥೆಯ ಮೂಲಕ ಅಧಿಕಾರದ ವಿಕೇಂದ್ರೀಕರಣಗೊಳಿಸುವ ಹಾಗೂ ನೀತಿ–ನಿಯಮಗಳನ್ನು ರೂಪಿಸುವ ಪ್ರಕ್ರಿಯೆಯಲ್ಲಿ ಪ್ರಮುಖ ಪಾತ್ರ ವಹಿಸಿದ ಹಾಗೂ ಪ್ರಸ್ತುತ ಕರ್ನಾಟಕ ರಾಜ್ಯದ 5ನೇ ಹಣಕಾಸು ಅಯೋಗದ ಅಧ್ಯಕ್ಷರಾಗಿ, ಕರ್ನಾಟಕ ಪಂಚಾಯತ್ ರಾಜ್ ಪರಿಷತ್ತಿನ

ಕಾರ್ಯಕಾರಿ ಅಧ್ಯಕ್ಷರಾಗಿ ಕಾರ್ಯನಿರ್ವಹಿಸುತ್ತಿರುವ ಸಿ. ನಾರಾಯಣಸ್ವಾಮಿ ಅವರಿಗೆ ಡಾಕ್ಟರ್ ಆಫ್ ಲಾಸ್ (ಎಲ್.ಎಲ್.ಡಿ) ಗೌರವ ಪದವಿ ನೀಡಲಾಯಿತು.

ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಸಹ ಕುಲಾಧಿಪತಿ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ, ವಿಶ್ವವಿದ್ಯಾಲಯದ ಕುಲಪತಿ ಪ್ರೊ. ವಿಷ್ಣುಕಾಂತ್ ಚಟಪಲ್ಲಿ, ಕುಲಸಚಿವ ಡಾ.ಸುರೇಶ ನಾಡಗೌಡರ ಮುಂತಾದವರು ಸಾಧಕರಿಗೆ ಅಭಿನಂದನೆ ಸಲ್ಲಿಸಿದರು.

ಇದೇ ಸಮಾರಂಭದಲ್ಲಿ 11 ಸ್ನಾತಕೋತ್ತರ ಸಾಧಕರಾದ ಎಂ.ಬಿ.ಎ ವಿಭಾಗದಲ್ಲಿ ಅತ್ಯಧಿಕ ಅಂಕಗಳನ್ನು ಪಡೆದ ಓಜಸ್ವಿ ಮಲ್ಲಾಡದ, ಎಂ.ಎ(ಆರ್.ಡಿ.ಪಿ.ಆರ್.) ವಿಭಾಗದ ಲಿಂಗರಾಜು ಎಚ್.ಎಮ್, ಎಂ.ಎ(ಪಿ.ಎ.)ವಿಭಾಗದ ಭೀಮಪ್ಪ ಚಲವಾದಿ, ಎಂ.ಎಸ್ಸಿ. (ಜಿ.ಐ.ಎಸ್)ವಿಭಾಗದ ಯಲ್ಲಾಲಿಂಗ ಹೊಸಮನಿ, ಎಂ.ಎಸ್ಸಿ (ಎಫ್ಎಸ್‌ಟಿ) ವಿಭಾಗದ ನಿಶಾ ಎಂ, ಎಂಪಿಎಚ್ ವಿಭಾಗದ ಶರೋನ್ ಅನ್ನಾ ಥಾಮಸ್, ಎಂಎಸ್‌ಡಬ್ಲ್ಯೂ ವಿಭಾಗದ ಅಕ್ಷತಾ ಸಾನಿಕೊಪ್ಪ ಹಾಗೂ ಕೀರ್ತಿ ಗಾಮನಗಟ್ಟಿ, ಎಂಎ (ಡಿಇ)ವಿಭಾಗದ ಜಗದೀಶ ಎನ್.ಬಳಿಗಾರ, ಎಂಕಾಂ ವಿಭಾಗದ ಲತಾ ಕಡಾರ, ಎಂ.ಎಸ್‌ಸಿ(ಸಿ.ಎಸ್)ವಿಭಾಗದ ಪವಿತ್ರಾ ಶೇಟ ಇವರಿಗೆ ಚಿನ್ನದ ಪದಕಗಳನ್ನು ನೀಡಿ ಗೌರವಿಸಲಾಯಿತು.

ಪ್ರೌಢಶಾಲೆಯ ನೂತನ ಕೊಠಡಿಗಳನ್ನು ಉದ್ಘಾಟಿಸಿದ ಶಾಸಕ ಜಿ.ಎಸ್. ಪಾಟೀಲ

ನಿಮ್ಮೂರ ಶಾಲೆಯ ಅಭಿವೃದ್ಧಿಗೆ ಕೈಜೋಡಿಸಿ

■ ವಿಜಯಸಾಕ್ಷಿ ಸುದ್ದಿ, ರೋಣ

ರೋಣ ಮತಕ್ಷೇತ್ರದಲ್ಲಿ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ಕಲ್ಪಿಸಲಾಗುವುದು. ಇದರೊಂದಿಗೆ ಕುರಹಟ್ಟಿ ಗ್ರಾಮದಲ್ಲಿ 50 ಲಕ್ಷ ರೂಗಳ ವೆಚ್ಚದಲ್ಲಿ ಪ್ರೌಢಶಾಲೆಯ ಮೂರು ಕೊಠಡಿಗಳನ್ನು ನಿರ್ಮಿಸಲಾಗುವುದು ಎಂದು ಶಾಸಕ ಹಾಗೂ ರಾಜ್ಯ ಖನಿಜ ನಿಗಮದ ಅಧ್ಯಕ್ಷ ಜಿ.ಎಸ್. ಪಾಟೀಲ ಭರವಸೆ ನೀಡಿದರು.

ಅವರು ಬುಧವಾರ ಕುರಹಟ್ಟಿ ಗ್ರಾಮದ ಪ್ರೌಢಶಾಲೆಯ ಎರಡು ನೂತನ ಕೊಠಡಿಗಳನ್ನು ಉದ್ಘಾಟಿಸಿ ಮಾತನಾಡಿದರು.

ಗ್ರಾಮೀಣ ಭಾಗಗಳ ಮಕ್ಕಳಿಗೆ ಶೈಕ್ಷಣಿಕ ಸೌಲಭ್ಯಗಳು ದೊರೆಯಬೇಕು ಎನ್ನುವುದು ನನ್ನ ಮೊದಲ ಆದ್ಯತೆಯಾಗಿದೆ. ಇದೇ ಕಾರಣದಿಂದ ಮತಕ್ಷೇತ್ರದಲ್ಲಿ ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡುತ್ತಾ ಬಂದಿದ್ದೇನೆ. ಈ ಬಾರಿಯೂ ಸಹ ಗ್ರಾಮೀಣ ಭಾಗದ ಮಕ್ಕಳ ಶೈಕ್ಷಣಿಕ ವ್ಯವಸ್ಥೆಯನ್ನು ಮತ್ತಷ್ಟು ಬಲಗೊಳಿಸುವಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂದರು.

ಗ್ರಾಮದಲ್ಲಿ ಈಗಾಗಲೇ ಎರಡು ಕೊಠಡಿಗಳು ಉದ್ಘಾಟನೆಗೊಂಡಿದ್ದು, ಮೂರನೇ ಕೊಠಡಿ ನಿರ್ಮಾಣಕ್ಕೆ ಭೂಮಿ ಪೂಜೆಯನ್ನು ಸಹ ಇಂದು ನೆರವೇರಿಸಲಾಗಿದೆ. ಮಕ್ಕಳ ಸಂಖ್ಯೆ ಹೆಚ್ಚಿರುವ ಕಾರಣ ಗ್ರಾಮದ ಪ್ರೌಢಶಾಲೆಗೆ ಹೆಚ್ಚುವರಿಯಾಗಿ ಇನ್ನೆರಡು ಕೊಠಡಿಗಳನ್ನು ನಿರ್ಮಿಸಲಾಗುವುದು. ಒಟ್ಟು ಶಾಲಾ ಕೊಠಡಿ ನಿರ್ಮಾಣಕ್ಕೆ 50 ಲಕ್ಷ ರೂಗಳನ್ನು ಒದಗಿಸಲಾಗುವುದು ಎಂದರು.

ಇದೇ ಸಂಧರ್ಭದಲ್ಲಿ ಶಾಲಾ ಕಟ್ಟಡಕ್ಕೆ ಭೂದಾನ ಮಾಡಿದ ಎಲ್. ಆರ್. ದೇಸಾಯಿ ಕುಟುಂಬದವರನ್ನು ಸ್ಮರಿಸಲಾಯಿತು. ಗಂಗಾಧರ ಶ್ರೀಗಳು ಸಾನಿಧ್ಯ ವಹಿಸಿದ್ದರು.

ಬಸವರಾಜ ನವಲಗುಂದ, ಯೂಸುಪ್ ಇಟಗಿ, ಡಿಡಿಪಿಐ ಎಲ್.ಆರ್. ರಡ್ಡೆರ, ಬಿಇಒ ರುದ್ರಪ್ಪ ಹುರಳಿ, ಪಿಡಬ್ಲುಡಿ ಇಇ ಬಲರಾಮ ನಾಯ್ಕರ್ ಸೇರಿದಂತೆ ಗ್ರಾ.ಪಂ, ಎಸ್‌ಡಿಎಂಸಿ ಅಧ್ಯಕ್ಷರು ಹಾಗೂ ಸದಸ್ಯರು, ಶಿಕ್ಷಕರು ಉಪಸ್ಥಿತರಿದ್ದರು.

ಗ್ರಾಮದ ಪ್ರೌಢಶಾಲೆ ವಿಶಾಲವಾದ ಮೈದಾನವನ್ನು ಹೊಂದಿದೆ. ಗ್ರಾ.ಪಂನವರು ನರೇಗಾ ಯೋಜನೆಯಲ್ಲಿ ಶಾಲೆಯ ಸುತ್ತಲೂ ಕಾಂಪೌಂಡನ್ನು ನಿರ್ಮಿಸಬೇಕು. ಶೌಚಾಲಯ ಸೇರಿದಂತೆ ಮೂಲಭೂತ ಸೌಲಭ್ಯಗಳನ್ನು ಒದಗಿಸಬೇಕು. ನಿಮ್ಮೂರ ಶಾಲೆಯ ಅಭಿವೃದ್ಧಿಗೆ ನೀವೆಲ್ಲರೂ ಪ್ರಮಾಣಿಕ ಪ್ರಯತ್ನ ಮಾಡಬೇಕು.

– ಜಿ.ಎಸ್. ಪಾಟೀಲ.
ಶಾಸಕರು, ಖನಿಜ ನಿಗಮದ ಅಧ್ಯಕ್ಷರು.

ಜಿಲ್ಲಾಡಳಿತ ಭವನದಲ್ಲಿ ನಡೆದ ಬರ ನಿರ್ವಹಣಾ ಸಭೆಯಲ್ಲಿ ಸಚಿವ ಪ್ರಿಯಾಂಕ್ ಖರ್ಗೆ ಸೂಚನೆ

ಜನಸಾಮಾನ್ಯರ ಅಹವಾಲುಗಳಿಗೆ ಸ್ಪಂದಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಬರಗಾಲ ಸಂದರ್ಭದ ಗಾಂಭೀರ್ಯತೆ ಅರಿತು ಅಧಿಕಾರಿಗಳು ಸಮನ್ವಯದಿಂದ ಕೆಲಸ ನಿರ್ವಹಿಸಬೇಕು ಎಂದು ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಜಿಲ್ಲಾಡಳಿತ ಭವನದಲ್ಲಿ ಬುಧವಾರ ಬರ ನಿರ್ವಹಣೆ ಕುರಿತು ಸಭೆಯ ಪ್ರಗತಿ ಪರಿಶೀಲನೆ ನಡೆಸಿ ಮಾತನಾಡಿದ ಅವರು, ಮುಂದಿನ ಎರಡು–ಮೂರು ತಿಂಗಳ ಅವಧಿಯಲ್ಲಿ ಜನಸಾಮಾನ್ಯರಿಗೆ ಜಾನುವಾರುಗಳಿಗೆ ನೀರು, ಮೇವಿನ ಸಮಸ್ಯೆ ತಲೆದೋರಿದಲ್ಲಿ ಸಮರ್ಪಕವಾಗಿ ಅಧಿಕಾರಿಗಳು ನಿರ್ವಹಿಸಬೇಕು. ಜನಸಾಮಾನ್ಯರ ಅಹವಾಲುಗಳಿಗೆ ಸಹಾನುಭೂತಿಯಿಂದ ಸ್ಪಂದಿಸಬೇಕು ಎಂದು ಸೂಚಿಸಿದರು.

ಕಾಮಗಾರಿ ಸ್ಥಳ ಪರಿಶೀಲಿಸಿ: ಜಿಲ್ಲೆಯಲ್ಲಿ ಜೆಜೆಎಂ ಬಾಕಿ ಉಳಿದಿರುವ ಕಾಮಗಾರಿ ಪೂರ್ಣಗೊಳಿಸಬೇಕು. ಈ ನಿಟ್ಟಿನಲ್ಲಿ ಆಯಾ ತಾಲೂಕಾ ಕಾರ್ಯನಿರ್ವಹಣಾಧಿಕಾರಿಗಳು ಗುತ್ತಿಗೆದಾರರೊಂದಿಗೆ ಹಾಗೂ ಪಿಡಿಓಗಳೊಂದಿಗೆ ಖುದ್ದು ಕಾಮಗಾರಿ ಸ್ಥಳಕ್ಕೆ ಹೋಗಿ ಪರಿಶೀಲನೆ ನಡೆಸಿ ಸಕ್ರಿಯವಾಗಿ ಕಾರ್ಯನಿರ್ವಹಿಸಬೇಕು. ಬರ ಕಾಮಗಾರಿ ಕೈಗೆತ್ತಿಕೊಂಡು ಶೀಘ್ರವಾಗಿ ನಿರ್ವಹಿಸಬೇಕು. ಗ್ರಾಮೀಣ ಭಾಗದ ಕಾಮಗಾರಿಗಳನ್ನು ಅಧಿಕಾರಿಗಳು ಖುದ್ದಾಗಿ ಸ್ಥಳ ಪರಿಶೀಲನೆ ನಡೆಸುವ ಮೂಲಕ ಸರ್ಕಾರದ ಅನುದಾನ ಸದ್ಬಳಕೆಯಾಗುತ್ತಿರುವ ಬಗ್

ಪ್ರತಿಭೆ ಪ್ರದರ್ಶಿಸಿದ ಬಿವಿವಿ ವಿದ್ಯಾರ್ಥಿಗಳು

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಬಾಲ ವಿನಾಯಕ ವಿದ್ಯಾನಿಕೇತನ ಶಾಲೆ ಮತ್ತು ಸಿಂಗಪೂರದ ಬೆಂಡೆಮೆಯರ್ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳು ಆನ್‌ಲೈನ್ ಮೂಲಕ ಆಯೋಜಿಸಿದ್ದ ಅಂತಾರಾಷ್ಟ್ರೀಯ ವಿದ್ಯಾರ್ಥಿಗಳ ವಿಚಾರ ವಿನಿಮಯ ಕಾರ್ಯಕ್ರಮದ ಸದುಪಯೋಗ ಪಡೆದುಕೊಂಡರು.

ಕಾರ್ಯಕ್ರಮದಲ್ಲಿ ಬಾಲ ವಿನಾಯಕ ವಿದ್ಯಾನಿಕೇತನ ಶಾಲೆಯ ವಿದ್ಯಾರ್ಥಿಗಳು ಕರ್ನಾಟಕದ ಜನಪದ ಕಲೆಗಳ ನೃತ್ಯ ಪ್ರದರ್ಶನ, ರಂಗೋಲಿ ಕಲೆ ಹಾಗೂ ಶಾಸ್ತ್ರೀಯ ಸಂಗೀತದ ದುರ್ಗಾರಾಗವನ್ನು ಪ್ರದರ್ಶಿಸಿದರು. ಈ ಎಲ್ಲ ಭಾರತೀಯ ಸಂಸ್ಕೃತಿಯನ್ನು ಆನ್ ಲೈನ್ ಮೂಲಕ ವೀಕ್ಷಿಸಿದ ಸಿಂಗಪೂರದ ಬೆಂಡೆಮಿಯರ್ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳು, ಪ್ರಾಚಾರ್ಯರಾದ ಟಾನ್ ಲಿಂ, ಕಾರ್ಯಕ್ರಮದ ಸಂಘಟಕ ಆಲ್ವೀನ್ ಲೀ ಮತ್ತು ಶಾಲೆಯ ಎಲ್ಲ ಶಿಕ್ಷಕರು ಸಂತಸ ವ್ಯಕ್ತಪಡಿಸಿದರು.

ಅದೇ ರೀತಿ ಸಿಂಗಪೂರದ ಬೆಂಡೆಮಿಯರ್ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳು ಓದುವಿಕೆಯ (ರಿಡಿಂಗ್ ಸರ್ಕಲ್) ಚಟುವಟಿಕೆಯನ್ನು ವಿನಿಮಯ ಮಾಡಿಕೊಂಡರು. ಪ್ರಾಸ್ತಾವಿಕವಾಗಿ ಮಾತನಾಡಿದ ಬಿವಿವಿ ನಿರ್ದೇಶಕ ವಿನಾಯಕ ಆರ್., ಈ ಚಟುವಟಿಕಯು ಭಾಷಾ ಕಲಿಕೆಯಲ್ಲಿ ಅತ್ಯಂತ ಉಪಯೋಗಕಾರಿಯಾಗಿದೆ ಎಂದರು.

ಸುಸಜ್ಜಿತವಾದ ಕಾರ್ಯಕ್ರಮವನ್ನು ವೀಕ್ಷಿಸಿದ ಶಾಲೆಯ ಕಾರ್ಯದರ್ಶಿ ಎಸ್.ರವಿ, ಇ.ಎಲ್.ಸಿಯ ಮುಖ್ಯಸ್ಥರಾದ ಮಲ್ಲಿಕಾ ಆರ್, ಪ್ರಾಚಾರ್ಯ ವಿ.ಎಂ. ಅಡ್ಡೂರ, ಉಪಪ್ರಾಚಾರ್ಯ ಪಿ.ಜಿ. ಬ್ಯಾಳಿ ಸಮಸ್ತ ತಂಡಕ್ಕೆ ಅಭಿನಂದನೆ ಸಲ್ಲಿಸಿದರು.

ಲಕ್ಷ್ಮೇಶ್ವರ ತಾಲೂಕಿನ ಶಿಗ್ಲಿ ಗ್ರಾಮದ ಶ್ರೀ ಗುರುಬಸಪ್ಪಜ್ಜ ದಂಪತಿಗಳ ಜಾತ್ರಾ ಮಹೋತ್ಸವ

ಶಿಗ್ಲಿಯ ತಪೋನಿಧಿ ಶ್ರೀಗುರುಬಸಪ್ಪನವರು

ಶಿಗ್ಲಿ ಗ್ರಾಮವು ಲಕ್ಷೇಶ್ವರ ತಾಲೂಕಿನಲ್ಲಿ ಗದಗ ಜಿಲ್ಲೆಯ ದಕ್ಷಿಣ ಅಂಚಿನಲ್ಲಿದ್ದು, ಗಣನೀಯವಾಗಿ ಗುರುತಿಸಿಕೊಂಡ ಗ್ರಾಮವಾಗಿದೆ. ಅಷ್ಟೇ ಅಲ್ಲದೆ, ಉತ್ತಮ ಆಧ್ಯಾತ್ಮದ ಹಿನ್ನೆಲೆಯನ್ನೂ ಹೊಂದಿದೆ. ಪುರಾತನ ಕಾಲದಲ್ಲಿ ಹಳ್ಳದ ದಂಡೆಗುಂಟ ಸಮೃದ್ಧವಾದ ವನಸಿರಿ ಇತ್ತು. ಇಲ್ಲಿ ಕಲ್ಯಾಣ ಶರಣ ಸಂಪ್ರದಾಯದ ಸಿದ್ಧಲಿಂಗ ಯತಿಗಳು ಬಂದು ನೆಲೆಸಿದ್ದರು. ಅವರ ತಪೋಬಲವನ್ನು ಕಂಡು ಲಕ್ಷ್ಮೇಶ್ವರದ ಅಂದಿನ ದೇಸಾಯಿಯವರು ಈ ಪ್ರದೇಶವನ್ನು ಯತಿಗಳಿಗೆ ಉಂಬಳಿ ಹಾಕಿಕೊಟ್ಟರು. ಸಿದ್ದಲಿಂಗ ಯತಿಗಳ ಶಿಷ್ಯರು-ಪ್ರಶಿಷ್ಯರು ನೆಲೆಸಿದ ಈ ಊರನ್ನು ಜನರು 'ಸಿದ್ಧಲಿಂಗ' ಎಂದೇ ಕರೆದರು. ಅದೇ ಬರಬರುತ್ತ ವನ ಸಿಗ್ನಲಿ, ಸಿಗ್ನಲಿ ಸಂತೆ ಶಿಗಲಿ ಎಂದಾಯಿತು.

ಮುಂದಿನ ಯುಗಾಂತರಕ್ಕೆ ಬಂದರೆ, ಶಿಶುನಾಳದ ಶರೀಫಜ್ಜನವರ ಯೋಗ ಸಾಧನೆಗೆ ಗುರುವಾಗಿದ್ದ ಶ್ರೀ ವೀರಪ್ಪಜ್ಜನವರು ಇಲ್ಲಿಗೆ ಬಂದು ನೆಲೆಸಿದರು. ಅವರು ತಮ್ಮ ಶಿಷ್ಯರೊಂದಿಗೆ ನಿರ್ಮಿಸಿದ್ದ ಗವಿ, ಅದರಲ್ಲಿ ಗದ್ದುಗೆ, ಬಾವಿ ಇವುಗಳನ್ನು ನಿರ್ಮಿಸಿದರು. ಇವು ಇನ್ನೂ ಸುಸ್ಥಿತಿಯಲ್ಲಿದ್ದು, ಇಂದು 'ಸೇವಾ ಮಂದಿರ'ವಾಗಿ ಮುಂದುವರೆದಿದೆ.

ಇಂಥ ಊರಿಗೆ ಮಹಾ ತಪೋನಿಧಿ ಮತ್ತು ಇಚ್ಛಾ ಮರಣ ಪಡೆದ ದಂಪತಿಗಳು ಶ್ರೀ ಗುರುಬಸಪ್ಪಜ್ಜನವರು ಮತ್ತು ಶಾಂತಿವೀರಮ್ಮನವರು ಬಂದು ಬಹುಕಾಲ



ನೆಲೆಸಿದರು. ಇವರ ಮೂಲ ಊರು 'ತಾಂಬಾ'. ಇದು ವಿಜಾಪುರ ಜಿಲ್ಲೆಯ ಇಂಡಿ ತಾಲೂಕಿನಲ್ಲಿದೆ. 1860ರಲ್ಲಿ ಸ್ಥಿತಿವಂತ ಬಣಗಾರ ಮನೆತನದಲ್ಲಿ ಎಂಟು ಜನ ಸಹೋದರರಲ್ಲಿ 7ನೇ ಮಗುವಾಗಿ ಜನಿಸಿದರು.

ಬಾಲ್ಯದಿಂದಲೇ ಆಧ್ಯಾತ್ಮ ಮತ್ತು ತತ್ವ ಶಾಸ್ತ್ರಗಳಲ್ಲಿ ಒಲವು ಬೆಳೆಸಿಕೊಂಡು ಬೆಳೆದರು. ತಂದೆ ತಾಯಿ ಮತ್ತು ಗುರು ಹಿರಿಯರು ಅಜ್ಞಾನಸಾರ ವಿವಾಹವಾದರು. ಇವರು ಧರ್ಮಪತ್ನಿ ಶಾಂತಿವೀರಮ್ಮ ಗಂಡನ ಒಲವಿನಂತೆ ಗಂಡನ ನೆರಳಾಗಿ ಬಾಳಿದರು. ಅಣ್ಣ-ತಮ್ಮಂದಿರಲ್ಲಿ ಆಸ್ತಿ ವ್ಯಾಜ್ಯಕ್ಕೆ ಬೇಸತ್ತು ಯಾವ ಪಾಲು ಪಡೆಯದೆ ವಿರಕ್ತರಾಗಿ 1985ರಲ್ಲಿ ದೂರದ ಶಿಗ್ಲಿಗೆ ಬಂದು ನೆಲೆಸಿದರು. ಇಲ್ಲಿ ಆಧ್ಯಾತ್ಮದ ವಾತಾವರಣ ಇವರನ್ನು ಚುಂಬಕದಂತೆ ಸೆಳೆದಿತ್ತು. ಇಲ್ಲಿಯ ಸಹೃದಯ ಜನರು ಇವರನ್ನು ಸ್ವಾಗತ ಆಶ್ರಯ ನೀಡಿದರು. ಆಗ ಇವರಿಗೆ 35ವರ್ಷಗಳ ಏರು ಪ್ರಾಯ.

ದಂಪತಿಗಳಿಬ್ಬರು ಜನಾನುರಾಗಿ ಕಾಯಕನಿಷ್ಠರಾಗಿ ಜನರೊಂದಿಗೆ ದುಡಿದರು. ದಾನ ಮಾಡುವುದಕ್ಕಾಗಿ ಗಳಿಸುತ್ತಿದ್ದರು. ಜನಸೇವೆಯೇ ಜೀವನ ಗುರಿಯಾಗಿತ್ತು. ವೈದ್ಯಕೀಯ ಸೌಲಭ್ಯವಿಲ್ಲದ ಆಗಿನ ಕಾಲದಲ್ಲಿ ಗುರುಬಸಪ್ಪನವರು ನೀಡುತ್ತಿದ್ದ ಗಾವಟಿ ಔಷಧಿ ಮತ್ತು 'ರ ಬಳಿ' ಉಪಚಾರವು ಜನರಿಗೆ ವರದಾನವಾಗಿತ್ತು. ಊರಿನ ಗೌಡರಿಗೂ ಉಪಚಾರ ನೀಡಿ ಗುಣಪಡಿಸಿದರು. ಹೀಗೆ ಪರಸ್ಪರಲ್ಲಿ ಸ್ನೇಹ, ಆತ್ಮೀಯತೆ ಬೆಳೆದಿತ್ತು. ಗೌಡರ ಜಮೀನನ್ನು ಲಾವಣಿ ತರೀಕ ವ್ಯವಸಾಯ ಮಾಡಿದರು. ಅಲ್ಲೇ ಗುಡಿಸಿಲು ಕಟ್ಟಿಕೊಂಡು ಬಾಳಿದರು, ದುಡಿಮೆಯಲ್ಲಿ ದೇವರನ್ನು ಕಂಡರು.

ಅವರು ಉಪದೇಶಗಳು ಜನರಿಗೆ ಹಿತವಾಗಿದ್ದವು. ಅತಿ ಆಸೆ, ಅತಿ ಪ್ರೀತಿ,

ಮಾ.8, ಶಿವರಾತ್ರಿಯ ದಿನ ರಾತ್ರಿ 8 ಗಂಟೆಯಿಂದ ಜಾಗರಣೆ, ಶಿವಕೀರ್ತನೆ ಹಾಗೂ ಭಜನಾ ಮಂಡಳಿಗಳಿಂದ ಕಾರ್ಯಕ್ರಮ, ಮಾ.10ರ ಅಮವಾಸ್ಯೆ ಮುಂಜಾನೆ 8 ಗಂಟೆಗೆ ಶ್ರೀ ಗುರುಬಸಪ್ಪಜ್ಜ ದಂಪತಿಗಳ ಗದ್ದುಗೆಗೆ ಪೂಜಾಭಿಷೇಕ, ನಂತರ ಶ್ರೀ ಗುರುಬಸಪ್ಪಜ್ಜ ಹಾಗೂ ಶಾಂತವೀರಮ್ಮನವರ ಮೂರ್ತಿಗಳ ಮೆರವಣಿಗೆಯು ಸಕಲ ವಾದ್ಯ-ವೈಭವಗಳೊಂದಿಗೆ ಊರಿನ ಪ್ರಮುಖ ಬೀದಿಗಳಲ್ಲಿ ಹಾಯ್ದು ಮಠಕ್ಕೆ ಬರುವುದು. ಮಾ. 11ರ ಸಾಯಂಕಾಲ 4 ಗಂಟೆಗೆ ಪಲ್ಲಕ್ಕಿ ಉತ್ಸವ ಹಾಗೂ ಕಡುಬಿನ ಕಾಳಗ ಹಾಗೂ ಮಹಾಪ್ರಸಾದ ನೆರವೇರುವುದು.

ಅತಿ ಅವಲಂಬನೆ ಇವು ದುಃಖಕ್ಕೆ ಕಾರಣವಾಗುತ್ತದೆ. ದ್ವೇಷ, ಅಸೂಯೆ, ಕೋಪ-ತಾಪ ನಮ್ಮನ್ನು ಕುಬ್ಜರನ್ನಾಗಿ ಮಾಡುತ್ತವೆ. ಹೊಗಳಿಕೆಗೆ ಹಿಗ್ಗದೆ, ತೆಗಳಿಕೆಗೆ ಕುಗ್ಗದೆ ಸಮ ಚಿತ್ತರಾಗಿರಬೇಕು. ನಮ್ಮ ಸುಖ ದುಃಖಗಳಿಗೆ ಮನಸೇ ಕಾರಣವಾಗಿರುತ್ತದೆ. ಹೀಗೆ ಮನಸ್ಸು ಮತ್ತು ದೇಹಗಳ ಸಮಾಧಾನದ ಮಹತ್ವ ತಿಳಿಸುತ್ತಿದ್ದರು.

ಗುರುಪಸಪ್ಪಜ್ಜನವರದು ಯೋಜನಾಬದ್ಧ ಬದುಕು, ಎಲ್ಲದರಲ್ಲೂ ಶಿಸ್ತು ಎದ್ದು ಕಾಣುತ್ತಿತ್ತು. ತಾವು ಸಪತ್ನಿಕರಾಗಿ ವರ್ಷಪೂರ್ತಿ ದುಡಿದು ಗಳಿಸಿದ್ದನ್ನು ನಾಲ್ಕು ಭಾಗಗಳಾಗಿ ವಿಂಗಡಿಸಿ, ಒಂದನ್ನು ಸ್ವಂತ ಉಪಜೀವನಕ್ಕೆ, ಎರಡನೇ ಭಾಗವನ್ನು ದಾನ-ಧರ್ಮಗಳಿಗೆ, ಮೂರನೆಯದನ್ನು ನಿತ್ಯ ಬರುತ್ತಿದ್ದ ಅತಿಥಿ, ಸಾಧು, ಸಂತರ ಸತ್ಕಾರ, ಉಪಚಾರಕ್ಕೆ ಮತ್ತು ನಾಲ್ಕನೇ ಭಾಗವನ್ನು ಶಿವರಾತ್ರಿ ವ್ರತಾಚರಣೆಯಲ್ಲಿ ವ್ಯಯಿಸಿ ವರ್ಷದ ಗಳಿಕೆಯನ್ನು ಮುಗಿಸುತ್ತಿದ್ದರು. ಹಬ್ಬದ ಮರುದಿನ ಮತ್ತೆ ಹೊಸ ಗಳಿಕೆ ಪ್ರಾರಂಭ. ಶಿವರಾತ್ರಿ ಅವರ ಭಕ್ತಿ-ಶ್ರದ್ಧೆಯ ಹಬ್ಬವಾಗಿತ್ತು.

1924ರಲ್ಲಿ ಬೆಳಗಾವ ಕಾಂಗ್ರೆಸ್ ಅಧಿವೇಶದಲ್ಲಿ ಭಾಗವಹಿಸಿ ಮಹಾತ್ಮ ಗಾಂಧಿ ಅವರಂಥ ರಾಷ್ಟ್ರ ನಾಯಕರನ್ನು ಕಂಡು ಮಾತನಾಡಿಸಿ ಬಂದರು. ಅಲ್ಲಿಂದ ಬರುವಾಗ ಗಾಂಧೀ ಟೋಪಿ ಧರಿಸಿದರು. ಅದು ಆಗ ರಾಷ್ಟ್ರೀಯತೆಯ ಸಂಕೇತವಾಗಿತ್ತು. ಹೀಗೆ ಶಿಗ್ಲಿ ಯುವಕರಲ್ಲಿ ರಾಷ್ಟ್ರ ಪ್ರಜ್ಞೆಯನ್ನೂ ಮೂಡಿಸಿದರು.

1931ನೇ ಜನವರಿ 30ರಂದು ಬನದ ಹುಣ್ಣಿಮೆಯ ದಿನ ಇಚ್ಛಾ ಮರಣ ಹೊಂದಿದರು. ಅವರ ಈ ನಿರ್ಧಾರ ತಿಳಿದ ಪತ್ನಿಯೂ ಇವರು ಮುಂದೆಯೇ ಅದೇ ದಿನ ಇಚ್ಛಾ ಮರಣ ಪಡೆದರು. ಹೀಗೆ ದಂಪತಿಗಳಿಬ್ಬರು ಎಲ್ಲಾ ಶಿಷ್ಯ ಬಳಗದವರ ಭಜನೆ, ಶಿವನಾಮ ಸ್ಮರಣೆಗಳ ನಡುವೆ ದೇಹ ತ್ಯಾಗ ಮಾಡಿದ್ದು ಅಪರೂಪದ ಸನ್ನಿವೇಶವಾಗಿತ್ತು.

ಬಿಜೆಪಿಯಿಂದ 'ಶಕ್ತಿವಂದನಾ' ಪಾದಯಾತ್ರೆ

■ ವಿಜಯಸಾಕ್ಷಿ ಸುದ್ದಿ, ಗದಗ

ದೇಶ ವಿರೋಧಿ ಮತ್ತು ದೇಶ ವಿಭಜನೆಯ ಹೇಳಿಕೆಯನ್ನು ಖಂಡಿಸಿ ಭಾರತೀಯ ಜನತಾ ಪಾರ್ಟಿ ಗದಗ ಜಿಲ್ಲಾ ಮಹಿಳಾ ಮೋರ್ಚಾ ವತಿಯಿಂದ ಜಾಗ್ರತಾ ಪಾದಯಾತ್ರೆ ಹಮ್ಮಿಕೊಳ್ಳಲಾಯಿತು.

ರಾಜ್ಯದಲ್ಲಿ ನಡೆಯುತ್ತಿರುವ ದೇಶ ವಿರೋಧಿ ಕೃತ್ಯಗಳು, ಘೋಷಣೆಗಳು ಹಾಗೂ ದೇಶ ವಿಭಜನೆಯ ಹೇಳಿಕೆಗಳನ್ನು ಖಂಡಿಸಿ, ದೇಶಭಕ್ತಿ ಜಾಗೃತಿಯ ನಿಟ್ಟಿನಲ್ಲಿ ಹಾಗೂ ಕೇಂದ್ರದಲ್ಲಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ 3ನೇ ಬಾರಿಗೆ ಬಿಜೆಪಿ ಸರ್ಕಾರ ಅಧಿಕಾರ ನೀಡಲು ತಿರಂಗಾ ಯಾತ್ರೆ ಹಾಗೂ ನಾರಿ ಶಕ್ತಿವಂದನ ಪಾದಯಾತ್ರೆ ಗದಗ ನಗರದ ಭೂಮರೆಡ್ಡಿ ಸರ್ಕಲ್‌ನಿಂದ ಟಾಂಗಾಕೂಟವರೆಗೆ ಜರುಗಿತು.

ಈ ಸಂದರ್ಭದಲ್ಲಿ ಬಿಜೆಪಿ ಗದಗ ಜಿಲ್ಲಾಧ್ಯಕ್ಷ ರಾಜು ಕುರುಡಗಿ, ಮುಖಂಡರಾದ ಪಕ್ಕಿರೇಶ್ ರಟ್ಟಿಹಳ್ಳಿ, ಲಿಂಗರಾಜ್ ಪಾಟೀಲ್, ಭಾರತಿ ಅಳವಂಡಿ, ಸಂತೋಷ ಅಕ್ಕಿ, ನಿರ್ಮಲಾ ಕೊಳ್ಳಿ, ಕಾಂತೀಲಾಲ ಬನ್ಸಾಲಿ, ಸಿದ್ದು ಪಲ್ಲೇದ, ನಗರಸಭಾಧ್ಯಕ್ಷೆ ಉಷಾ ದಾಸರ, ಇರ್ಷಾದ ಮಾನ್ವಿ, ಅನಿಲ ಅಬ್ಬಿಗೇರಿ, ದೇವಪ್ಪ ಗೊಟೂರ, ಅಶೋಕ ಸಂಕಣ್ಣವರ, ವಿನಾಯಕ ಮಾನ್ವಿ, ನಾಗರಾಜ ತಳವಾರ, ಗಂಗಾಧರ ಹಬೀಬ, ಅಶೋಕ ಕರೂರ, ಅಪ್ಪಣ್ಣ ಟೆಂಗಿನಕಾಯಿ, ಅಶೋಕ ಕರೂರ, ಅಮರನಾಥ ಬೆಟಗೇರಿ, ಶಿವು ಹಿರೇಮನಿಪಾಟಿಲ, ಸುಧೀರ ಕಾಟಿಗರ, ವಿಜಯಲಕ್ಷ್ಮೀ ಶಶಿಧರ ದಿಂಡೂರ, ವಿಜಯಲಕ್ಷ್ಮೀ ಮಾನ್ವಿ, ಸ್ವಾತಿ ಅಕ್ಕಿ, ವಿದ್ಯಾವತಿ ಅಮರನಾಥ ಗಡಗಿ, ಸಿದ್ರಾಮೇಶ ಹಿರೇಮಠ, ಲಕ್ಷ್ಮೀ ಶಂಕರ ಕಾಕಿ, ಬೂದಪ್ಪ ಹಳ್ಳಿ, ರಮೇಶ ಸಜ್ಜಗಾರ, ರೇಖಾ ಬಂಗಾರಶೆಟ್ಟರ, ಪದ್ಮಿನಿ ಮುತ್ತಲದಿನ್ನಿ, ಶೇಖವ್ವ ಮಾಸರೆಡ್ಡಿ, ಮಾಂತೇಶ ಬಾತಾಖಾನಿ, ವೆಂಕಟೇಶ ಹಬೀಬ, ನವೀನ ಕೊಟೆಕಲ್, ಸುರೇಶ ಮರಳಪ್ಪನವರು, ಸುರೇಶ ಚಿತ್ತರಗಿ, ಶಿವು ಗೊಟೂರ ಸೇರಿದಂತೆ ಅಪಾರ ಕಾರ್ಯಕರ್ತರು ಉಪಸ್ಥಿತರಿದ್ದರು.

ಕಾರ್ಮಿಕ ಕಲ್ಯಾಣ ಸಂಸ್ಥೆಯಿಂದ ಸನ್ಮಾನ ಕಾರ್ಯಕ್ರಮ

ಕಾರ್ಮಿಕರು ಮಕ್ಕಳ ಶಿಕ್ಷಣಕ್ಕೆ ಒತ್ತು ನೀಡಿ

■ ವಿಜಯಸಾಕ್ಷಿ ಸುದ್ದಿ, ಗದಗ

ಕಾರ್ಮಿಕರು ತಮ್ಮ ಮಕ್ಕಳ ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಬೇಕು. ಕಾರ್ಮಿಕರು ಕಷ್ಟ ಜೀವಿಗಳಾಗಿದ್ದು, ಮಕ್ಕಳ ಭವ್ಯ ಭವಿಷ್ಯ ರೂಪಿಸಲು ಅವರಿಗೆ ಉನ್ನತ ಶಿಕ್ಷಣ, ಉತ್ತಮ ಸಂಸ್ಕಾರ, ಸಂಸ್ಕೃತಿಯನ್ನು ರೂಢಿಸಬೇಕೆಂದು ಗದುಗಿನ ಅಪ್ಪುರಾಜ್ ಇವೆಂಟ್ಸ್ ಹಾಗೂ ಗದಗ ಹೆಲ್ಪಿಂಗ್ ಹ್ಯಾಂಡ್ಸ್ ಫೌಂಡೇಶನ್‌ನ ಅಧ್ಯಕ್ಷ ಅಪ್ಪುರಾಜ ಭದ್ರಕಾಳಮ್ಮನಮಠ ಅಭಿಪ್ರಾಯಪಟ್ಟರು.

ಅವರು ಕಾರ್ಮಿಕ ಕಲ್ಯಾಣ ಸಂಸ್ಥೆ ಗದಗ, ಗದಗ ಜಿಲ್ಲಾ ಸಮಸ್ತ ಕಟ್ಟಡ ಕಾರ್ಮಿಕರ ಬಳಗದಿಂದ ನಗರದ ಕಾರ್ಮಿಕ ಕಲ್ಯಾಣದ ಸಂಸ್ಥೆಯಲ್ಲಿ ಏರ್ಪಡಿಸಿದ್ದ, ಕಾರ್ಮಿಕರ ಮಕ್ಕಳ ಸ್ನಾತಕೋತ್ತರ ಎಲ್.ಎಲ್.ಎಂ ಪದವಿ ಪಡೆದ ಕಾರ್ಮಿಕರ ಮಕ್ಕಳ ಸನ್ಮಾನ

ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ನ್ಯಾಯವಾದಿ ಎಸ್.ಕೆ. ನದಾಫ ಕಾರ್ಮಿಕರಿಗೆ ಕಾನೂನಿನ ಬಗ್ಗೆ ತಿಳುವಳಿಕೆ ನೀಡಿದರು. ಕಾರ್ಮಿಕ ಕಲ್ಯಾಣ ಸಂಸ್ಥೆಯ ಗೌರವ ಅಧ್ಯಕ್ಷ ಝಡ್.ಡಿ. ಬೇಲೇರಿ, ಭೀಮಸಿ ಪೂಜಾರ ಜಂದಿಸಾಬ ಬಳ್ಳಾರಿ ವೇದಿಕೆಯ ಮೇಲೆ ಉಪಸ್ಥಿತರಿದ್ದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಗದಗ ಹೆಲ್ಪಿಂಗ್ ಹ್ಯಾಂಡ್ಸ್ ಫೌಂಡೇಶನ್‌ನ ಉಪಾಧ್ಯಕ್ಷ ಬಸವರಾಜ ಜಿನಗಾ, ಮುಳಗುಂದದ ಉದಯ ಕಟ್ಟಡ ನಿರ್ಮಾಣ ಕೂಲಿ ಕಾರ್ಮಿಕರ ಸಂಘದ ಉಪಾಧ್ಯಕ್ಷ ಮೌಲಾಸಾಬ ಸದರಬಾವಿ, ಕಾರ್ಮಿಕ ಕಲ್ಯಾಣ ಸಂಸ್ಥೆಯ ಅಧ್ಯಕ್ಷ ಮಹಮ್ಮದಇರ್ಫಾನ್ ಡಂಬಳ ಕಾರ್ಮಿಕರ ಬದುಕು ಹಾಗೂ ಸಾಮಾಜಿಕ ಹೊಣೆಗಾರಿಕೆ ಕುರಿತು ಮಾತನಾಡಿದರು.

ಸಮಾರಂಭದಲ್ಲಿ ಗದುಗಿನ ಎಚ್.ಸಿ.ಇ.ಎಸ್ ಕಾನೂನು ಮಹಾವಿದ್ಯಾಲಯದ ಉಪನ್ಯಾಸಕರು, ನ್ಯಾಯವಾದಿಗಳಾದ ನಾಜಿಮಾ ಎನ್.ಮುಲ್ಲಾ ಅವರನ್ನು ಸಂಘಟನೆಯ ಪರವಾಗಿ ಸನ್ಮಾನಿಸಿ ಗೌರವಿಸಲಾಯಿತು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಶಂಕರಗೌಡ ಭರಮಗೌಡ್ರ ಸಂದರ್ಭೋಚಿತವಾಗಿ ಮಾತನಾಡಿದರು. ನಿಂಗಪ್ಪ ಕಟ್ಟಿಮನಿ ಸ್ವಾಗತಿಸಿದರು. ನಾಶೀರ ಚಿಕೇನಕೊಪ್ಪ ನಿರೂಪಿಸಿದರು. ಇಬ್ರಾಹಿಂ ಹಳ್ಳಿಕೇರಿ ವಂದಿಸಿದರು.

ಸಮಾರಂಭದಲ್ಲಿ ಮಹಮ್ಮದಲಿ ಕಾತರಕಿ, ಮಹ್ಮದಇಸೂಫ ಬೇಪಾರಿ, ಶಿವಶಂಕರಗೌಡ ಕರಿಸೋಮನಗೌಡ್ರ, ಸುನೀಲ ಚಳಗೇರಿ, ಚನ್ನವೀರಗೌಡ ಪಾಟೀಲ, ಎಂ.ಎಸ್. ಹಳ್ಳಿಕೇರಿ, ಮುನೀರ್‌ಅಹ್ಮದ್ ಸವಣೂರ, ವಿಜಯಲಕ್ಷ್ಮೀ ಕುರ್ತಕೋಟಿ, ರತ್ನಾ ಕುರಗೋಡ, ಪಾಲಾಕ್ಷವ್ವ ವಾಲ್ಮೀಕಿ, ಶೌಕತ್ ಯರಂಡಿವಾಲೆ, ಅಲ್ಲಾಭಕ್ಷ ದೊಡ್ಡಮನಿ, ರಮೇಶ ವಾಲ್ಮೀಕಿ, ಮಲ್ಲು ವಾಲ್ಮೀಕಿ ಮುಂತಾದವರಿದ್ದರು.

ಕರ್ನಾಟಕ ಉರ್ದು ಅಕಾಡೆಮಿಯಿಂದ ಉರ್ದು ಪತ್ರಕರ್ತರಿಗೆ ಎರಡು ದಿನದ ಕಾರ್ಯಾಗಾರ

ವರದಿಗಳು ಕುತೂಹಲವನ್ನು ಹುಟ್ಟುಹಾಕಬೇಕು

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಪತ್ರಕರ್ತರು ನಮ್ಮ ಸಮಾಜದಲ್ಲಿ ಸತ್ಯದ ರಕ್ಷಕರಾಗಿದ್ದು, ಪತ್ರಕರ್ತರ ಪಾತ್ರ ಕೇವಲ ವರದಿಗೆ ಸೀಮಿತವಾಗಿಲ್ಲ. ಅವರು ಉತ್ತಮ ಪ್ರಪಂಚದ ವಾಸ್ತುಶಿಲ್ಪಿಗಳು, ತಳಮಟ್ಟದಲ್ಲಿ ಪ್ರಜಾಪ್ರಭುತ್ವವನ್ನು ಬಲಪಡಿಸಲು ಸಾರ್ವಜನಿಕ ಅಭಿಪ್ರಾಯವನ್ನು ರೂಪಿಸುವ ಕಾರ್ಯವನ್ನು ವಹಿಸಿದ್ದಾರೆ ಎಂದು ಕರ್ನಾಟಕ ಸರ್ಕಾರದ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಕಾರ್ಯದರ್ಶಿ ಮನೋಜ್ ಜೈನ್ ಅಭಿಪ್ರಾಯಪಟ್ಟರು.

ಬೆಂಗಳೂರಿನ ಶೇಷಾದ್ರಿಪುರಂ ನಲ್ಲಿರುವ ಕರ್ನಾಟಕದ ಉರ್ದು ಅಕಾಡೆಮಿಯಿಂದ ಇತ್ತೀಚೆಗೆ ಹಮ್ಮಿಕೊಂಡಿದ್ದ ಎರಡು ದಿನಗಳ ಕಾರ್ಯಾಗಾರದಲ್ಲಿ ಅವರು ಮಾತನಾಡಿದರು.

ಅಂಕಣಕಾರ ಮೊಹಮ್ಮದ್ ಅಜಮ್ ಶಾಹಿದ್ ಮಾತನಾಡಿ, ಇನ್ನೂರು ವರ್ಷಗಳ ಉರ್ದು ಪತ್ರಿಕೋದ್ಯಮವು ತ್ಯಾಗ, ಸಮಗ್ರತೆ ಮತ್ತು ಸತ್ಯಕ್ಕಾಗಿ ಮಣಿಯದ ಅನ್ವೇಷಣೆಯಿಂದ ಗುರುತಿಸಲ್ಪಟ್ಟಿದೆ. ಪತ್ರಿಕೋದ್ಯಮವೆಂದರೆ ಕೇವಲ ವರದಿ ಮಾಡುವುದಲ್ಲ. ಇದು ನಮ್ಮ ಸಂಸ್ಕೃತಿ ಮತ್ತು ಪರಂಪರೆಯ ಪಾಲಕ. ಉರ್ದು ಅಭಿವೃದ್ಧಿ ಹೊಂದುವುದನ್ನು ನಾವು ಖಚಿತಪಡಿಸಿಕೊಳ್ಳಬೇಕು. ಏಕೆಂದರೆ ಅದು ಕೇವಲ ಭಾಷೆಯಲ್ಲ ಆದರೆ ನಮ್ಮ ಹಂಚಿಕೆಯ ಪರಂಪರೆಯಾಗಿದೆ ಎಂದು ತಿಳಿಸಿದರು.

ಖ್ಯಾತ ಸಂಶೋಧಕ ಮತ್ತು ಪತ್ರಕರ್ತ ಡಾ. ಅನೀಸ್ ಸಿದ್ದಿಕಿ ಅವರು ಸುದ್ದಿ ಬರವಣಿಗೆಯ ಕರಕುಶಲ ಒಳನೋಟಗಳನ್ನು ಹಂಚಿಕೊಳ್ಳುತ್ತ, ಸುದ್ದಿಯನ್ನು ಕೌಶಲ್ಯ ಮತ್ತು ನಿಖರತೆಯೊಂದಿಗೆ ನೇಯ್ದ ಸತ್ಯಗಳ ಸೂಕ್ಷ್ಮವಾದ ವಸ್ತ್ರವಾಗಿದೆ. ಮಾಹಿತಿ ನೀಡುವುದು ಮಾತ್ರವಲ್ಲದೆ ಭಾವನೆಯನ್ನು ಹುಟ್ಟುಹಾಕಬೇಕು ಮತ್ತು ಕುತೂಹಲವನ್ನು ಹುಟ್ಟುಹಾಕಬೇಕು ಎಂದರು.

ಮೌಲಾನಾ ಆಜಾದ್ ರಾಷ್ಟ

ರೈಲ್ವೆ ಅಧಿಕಾರಿಗಳ ಸೇವೆ ಶ್ಲಾಘನೀಯ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಮಾರ್ಗವಾಗಿ ಆಯೋಧ್ಯೆಗೆ ತೆರಳುವ ವಿಶೇಷ ರೈಲಿನಲ್ಲಿ ಪ್ರಯಾಣಿಸುವ ಎಲ್ಲ ಪ್ರಯಾಣಿಕರಿಗೆ ವಿಷೇಶವಾಗಿ ಗದಗ ರೈಲು ನಿಲ್ದಾಣದಲ್ಲಿ ಆಸನ ವ್ಯವಸ್ಥೆ ಮಾಡಿ, ರೇಲ್ವೆ ವೈದ್ಯಾಧಿಕಾರಿ ಡಾ. ಕವಿರಾಜ ಕೊಟ್ನೂರ ಅವರು ಪ್ರಯಾಣಿಕರಿಗೆ ಸೂಕ್ತ ಸಲಹೆ ನೀಡಿ ಅವಶ್ಯ ಬಿದ್ದಲ್ಲಿ ಚಿಕಿತ್ಸೆ ನೀಡಿ ಔಷಧಿ ನೀಡಿ ಸಹಕರಿಸುತ್ತಿರುವುದಕ್ಕಾಗಿ ಬೆಟಗೇರಿ ರೇಲ್ವೆ ಹೋರಾಟ ಸಮಿತಿ ಅಧ್ಯಕ್ಷ ಗಣೇಶಸಿಂಗ ಬ್ಯಾಳಿ ಅಭಿನಂದನೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ರೇಲ್ವೆ ಅಧಿಕಾರಿಗಳಾದ ಏ.ಡಿ.ಎನ್. ಅಭಯ ಬಾಗಡೆ, ಏ.ಡಿ.ಇ.ಎನ್. ಮನೋಜ ಬಾಗಡೆ, ಸ್ಟೇಷನ್ ಮಾಸ್ಟರ, ಮಹೇಶ ಬೇವುರ, ಸಿ.ಪಿ.ಎಸ್.ಆರ್ ಸಿಶಿಲ ಎನ್. ಎಸ್, ಸಿ.ಸಿ.ಐ ರೀತೆಶ ಕುಮಾರ ಮುಂತಾದವರು ಉಪಸ್ಥಿತರಿದ್ದರು.

ಮಕ್ಕಳಿಂದ ವಿಜ್ಞಾನ ವಸ್ತು ಪ್ರದರ್ಶನ

■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಜಂತಲಿಶಿರೂರ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಹೆಣ್ಣುಮಕ್ಕಳ ಶಾಲೆಯಲ್ಲಿ ಮಹಾಸರಸ್ವತಿ ಪೂಜಾ ಸಮಾರಂಭ ಹಾಗೂ ಮಕ್ಕಳಿಂದ ವಿಜ್ಞಾನ ವಸ್ತುಪ್ರದರ್ಶನ ಏರ್ಪಡಿಸಲಾಗಿತ್ತು. ಶಾಲೆಯ ಎಸ್‌ಡಿಎಂಸಿ ಸರ್ವ ಸದಸ್ಯರು ಹಾಗೂ ಗ್ರಾಮಸ್ಥರು ವಿಜ್ಞಾನ ಪ್ರದರ್ಶನ ವೀಕಿಸಿ ಮೆಚ್ಚುಗೆ ಸೂಚಿಸಿದರು. ಶಾಲೆಯ ಮುಖ್ಯೋಪಾಧ್ಯಾಯ ಎಸ್.ಎಫ್. ಹಡಪದ, ಸಿಆರ್‌ಪಿ ಜಿ.ಕೆ. ವಸ್ತ್ರದ, ಶಿಕ್ಷಕರಾದ ಆರ್. ಎಸ್. ಕುರಿ, ಜಗದೀಶ ಗುಳಾರಿ, ಆರ್.ಬಿ. ಹೂಗಾರ, ಆರ್.ಎಸ್. ಸರವಿ, ಗಿರಿಜಾ ಪೂಜಾರ, ಅತಿಥಿ ಶಿಕ್ಷಕಿ ಯಶೋಧಾ ಬಡಿಗೇರ ಉಪಸ್ಥಿತರಿದ್ದರು.

ನಿರಂತರ ಅಧ್ಯಯನದೊಂದಿಗೆ ನಿಶ್ಚಿತ ಗುರಿ ತಲುಪಿ

■ ವಿಜಯಸಾಕ್ಷಿ ಸುದ್ದಿ, ಗದಗ

ಮುಂಡರಗಿ ತಾಲೂಕಿನ ಹಳ್ಳಿಕೇರಿಯ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಬೆಂಗಳೂರಿನ ಕೃಷಿ ವಿಜ್ಞಾನಿ, ಬಂಗಾರದ ಪದಕ ವಿಜೇತೆ ಡಾ. ನೀಲಮ್ಮ ಕೋಣನವರ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದರು.

ಡಾ. ನೀಲಮ್ಮ ಕೋಣನವರು ಮಾತನಾಡಿ, ವಿದ್ಯಾರ್ಥಿ ಜೀವನದಲ್ಲಿ ಪರಿಶ್ರಮ, ಶಿಸ್ತು, ನಿಯಮಿತ ಆಹಾರ, ಆಟೋಟಗಳು, ನಿರಂತರ ಅಧ್ಯಯನ ಮಾಡುವುದರ ಮೂಲಕ ನಿಶ್ಚಿತ ಗುರಿ ತಲುಪಬೇಕು. ಸಾಧನೆಗೆ ಅನೇಕ ಅವಕಾಶಗಳಿದ್ದು, ತಮ್ಮ ಅಭಿರುಚಿ, ಆಸಕ್ತಿಗಳಿಗೆ ಅನುಗುಣವಾಗಿ ಅಧ್ಯಯನ ಮಾಡಿ ಪ್ರತಿಭೆಯನ್ನು ಅನಾವರಣಗೊಳಿಸಬೇಕು. ಉತ್ತಮ ಹವ್ಯಾಸಗಳನ್ನು ರೂಢಿಸಿಕೊಳ್ಳುವ ಅಗತ್ಯವಿದೆ. ಗುರು-ಹಿರಿಯರನ್ನು ಗೌರವಿಸುವುದರೊಂದಿಗೆ ಉತ್ತಮ ಸಂಸ್ಕಾರ ಪಡೆದು ಸುಶಿಕ್ಷಿತರಾಗಬೇಕೆಂದರು.

ಸಾವಯವ ಕೃಷಿ ಮತ್ತು ಪರಿಸರ ಸಂರಕ್ಷಣೆ ಬಗ್ಗೆ ಹೆಚ್ಚು ಜಾಗೃತರಾಗಬೇಕಾಗಿರುವುದು ಇಂದಿನ ಅಗತ್ಯವಾಗಿದೆ ಎಂದರಲ್ಲದೆ, ಮಕ್ಕಳ ಪ್ರಶ್ನೆಗಳಿಗೆ ಉತ್ತರಿಸಿ, ಅವರಲ್ಲಿ ಸ್ಫೂರ್ತಿ ನೀಡಿ ಪ್ರೇರಿಪಿಸಿದರು.

ಗ್ರಾ.ಪಂ ಅಧ್ಯಕ್ಷೆ ಮರಿಯವ್ವ ನಿಂ.ಹಿರೇಮನಿ ಅಧ್ಯಕ್ಷತೆ ವಹಿಸಿದ್ದರು. ಇದೇ ಸಂದರ್ಭದಲ್ಲಿ ಡಾ. ನೀಲಮ್ಮ ಕೋಣನವರ ದಂಪತಿಗಳನ್ನು ಸನ್ಮಾನಿಸಿ, ಗೌರವಿಸಲಾಯಿತು. ಮುಖ್ಯ ಶಿಕ್ಷಕ ಬಿ.ವಾಯ್. ಡೊಳ್ಳಿನ ಸ್ವಾಗತಿಸಿ, ಪರಿಚಯಿಸಿದರು. ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಸಹ ಕಾರ್ಯದರ್ಶಿ ಉಮೇಶ ಹಂಚಿನಾಳ ನಿರೂಪಿಸಿದರು. ವಿದ್ಯಾರಾಣಿ ಕೂಬಳ್ಳಿ ವಂದಿಸಿದರು. ಕೆ.ಬಿ. ನದಾಫ, ಎಸ್.ಜಿ. ಶೀಲಭದ್ರ, ಎಮ್.ಡಿ. ಬೆಂತೂರ, ಕಮಲಾಕ್ಷಿ ರಾಟಿ, ಕಳಕಪ್ಪ ಕಲಕೇರಿ ಉಪಸ್ಥಿರಿದ್ದರು.

ವಿದ್ಯೆ ಯಾರೂ ಕದಿಯಲಾರದ ಸಂಪತ್ತು

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮಕ್ಕಳು ಪ್ರತಿಯೊಂದನ್ನು ಅನುಕರಣೆಯ ಮೂಲಕವೇ ಕಲಿಯುತ್ತಾರೆ. ಆದ್ದರಿಂದ ಪಾಲಕರು ಮಕ್ಕಳಿಗೆ ಅನುಕರಣೀಯರಾಗಿರಬೇಕು. ಕೇವಲ ಅಂಕಗಳಿಕೆಗೆ ಪ್ರಾಶಸ್ತ್ಯ ನೀಡದೇ ಸಂಸ್ಕಾರ, ಮಾನವೀಯ ಮೌಲ್ಯಗಳನ್ನು ಬಿತ್ತಬೇಕು ಎಂದು ಶಿಕ್ಷಣ ಅಧಿಕಾರಿ (ಇಸಿಓ) ಯು. ಎಚ್. ಹುಚ್ಚಯ್ಯನಮಠ ಹೇಳಿದರು.

ಅವರು ಇತ್ತೀಚೆಗೆ ಪಟ್ಟಣದ ಎಸ್‌ಟಿಪಿಎಂಬಿ ಆಂಗ್ಲ ಮಾಧ್ಯಮ ಶಾಲೆಯಲ್ಲಿ ನಡೆದ ವಾರ್ಷಿಕೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿ, ಮಹಿಳೆಯರಿಂದಲೇ ಪ್ರಾರಂಭವಾದ ತಾಯಿ ಪಾರ್ವತಿ ಮಕ್ಕಳ ಬಳಗದ ಶಾಲೆಯಲ್ಲಿ ನಮ್ಮ ಸಂಪ್ರದಾಯ, ಸಂಸ್ಕೃತಿ, ಆಧ್ಯಾತ್ಮಿಕ ನಿಲುವು, ಸಂಸ್ಕಾರ ಕಲಿಸುವ ಕಾರ್ಯ ಮಾಡುತ್ತಿರುವುದು ಶ್ಲಾಘನೀಯ. ವಿದ್ಯೆ ಯಾರೂ ಕದಿಯಲಾರದ ಸಂಪತ್ತು. ವಿದ್ಯಾರ್ಥಿಗಳು ಪಾಲಕರು ಮತ್ತು ಶಿಕ್ಷಕರಿಗೆ ವಿಧೇಯರಾಗಿ ಗುರಿ ಸಾಧನೆಯತ್ತ ಸಾಗಿರಿ. ಪಾಲಕರು ಇತರೇ ಮಕ್ಕಳೊಂದಿಗೆ ತಮ್ಮ ಮಕ್ಕಳನ್ನು ಹೋಲಿಸಿ ಜರಿಯಬೇಡಿ. ಇದರಿಂದ ಮಕ್ಕಳ ಮನಸ್ಸಿನ ಮೇಲೆ ಗಂಭೀರ ಪರಿಣಾಮ ಬೀರುತ್ತದೆ ಎಂದರು.

ಎಸ್‌ಟಿಪಿಎಂಬಿ ಆಂಗ್ಲ ಮಾಧ್ಯಮ ಶಾಲೆಯ ಉಪಾಧ್ಯಕ್ಷೆ ಜಯಲಕ್ಷ್ಮೀ ಮಹಾಂತಶೆಟ್ಟರ ಅಧ್ಯಕ್ಷತೆವಹಿಸಿ ಮಾತನಾಡಿದರು. ವೇದಿಕೆ ಮೇಲೆ ಜಯಲಕ್ಷ್ಮೀ ಗಡ್ಡದೇವರಮಠ, ಸುವರ್ಣಬಾಯಿ ಬಹದ್ದೂರದೇಸಾಯಿ, ಸಿಆರ್‌ಪಿ ಸತೀಶ ಬೋಮಲೆ, ಉಮೇಶ ನೇಕಾರ, ಎ.ಎನ್. ಮುಲ್ಲಾ, ಬಸವರಾಜ ಹೊಸಮನಿ, ಆರ್.ಎಸ್. ಪಾಟೀಲ, ಮುಖ್ಯ ಶಿಕ್ಷಕರಾದ ಸ್ವಾತಿ ಪೈ, ಪಿ.ಎಚ್. ಯಕ್ಕಿಕೊಪ್ಪ ಇದ್ದರು. ಕಳೆದ ವರ್ಷ ಜಿಲ್ಲಾ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿಗೆ ಭಾಜನರಾದ ಶಿಕ್ಷಕರನ್ನು ಸನ್ಮಾನಿಸಲಾಯಿತು.

ಶಿಕ್ಷಕರಾದ ಫಕ್ಕಿರೇಶ ಚಕಾರದ, ಜ್ಯೋತಿ ಮುಳಗುಂದ, ದೀಪಾ ಆದಿ ನಿರೂಪಿಸಿದರು. ವಿದ್ಯಾರ್ಥಿಗಳಿಂದ ನಡೆದ ವಿಶೇಷ ನೃತ್ಯ, ಸಾಂಸ್ಕೃತಿಕ ಕಾರ್ಯಕ್ರಮಗಳು ಗಮನ ಸೆಳೆದವು.

ತಹಸೀಲ್ದಾರ, ಪುರಸಭೆ ಮುಖ್ಯಾಧಿಕಾರಿ, ಹೆಸ್ಕಾಂ, ಪೊಲೀಸ್ ಅಧಿಕಾರಿಗಳಿಂದ ರೈತರ ಮನವೊಲಿಕೆ

ಅನಧಿಕೃತ ಪಂಪ್‌ಸೆಟ್‌ಗಳ ತೆರವು

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಲಕ್ಷ್ಮೇಶ್ವರ ಸೇರಿದಂತೆ ಹತ್ತಾರು ಹಳ್ಳಿಗಳಿಗೆ ಕುಡಿಯುವ ನೀರು ಸರಬರಾಜಾಗುವ ತುಂಗಭದ್ರಾ ನದಿ ಪಾತ್ರದ ತೆರದಹಳ್ಳಿ ಭಾಗದಲ್ಲಿ ರೈತರು ಬೆಳೆಗಳಿಗೆ ನೀರೆತ್ತಲು ಅಳವಡಿಸಿದ್ದ ಅನಧಿಕೃತ ಪಂಪ್‌ಸೆಟ್‌ಗಳನ್ನು ಬುಧವಾರ ಲಕ್ಷ್ಮೇಶ್ವರದ ತಹಸೀಲ್ದಾರ, ಪುರಸಭೆ ಮುಖ್ಯಾಧಿಕಾರಿ, ಹೆಸ್ಕಾಂ, ಪೊಲೀಸ್ ಅಧಿಕಾರಿಗಳ ನೇತೃತ್ವದಲ್ಲಿ ರೈತರ ಮನವೊಲಿಸಿ ತೆರವುಗೊಳಿಸಲಾಯಿತು.

ಕಳೆದ 2 ತಿಂಗಳಿಂದ ಕುಡಿಯುವ ನೀರಿಗಾಗಿ ಜನತೆ ಪರಿತಸಪಿಸುತ್ತಿದ್ದರೂ ನೀರೆತ್ತುವ ನದಿ ಪಾತ್ರದಲ್ಲಿ ಅನಧಿಕೃತ ಪಂಪ್‌ಸೆಟ್‌ಗಳು ಕಾರ್ಯ ನಿರ್ವಹಿಸುತ್ತಿದ್ದವು. ಈ ವೇಳೆ ಜಿಲ್ಲಾಧಿಕಾರಿಗಳ ಸೂಚನೆಯಂತೆ ಪುರಸಭೆ ಅಧಿಕಾರಿಗಳು ಪಂಪ್‌ಸೆಟ್‌ಗಳನ್ನು ತೆರವುಗೊಳಿಸಿದ್ದರು. ಇತ್ತೀಚೆಗೆ ನದಿಗೆ ನೀರು ಬಿಟ್ಟಿದ್ದರಿಂದ ಮತ್ತೆ ರೈತರು ನೀರೆತ್ತುವ ಜಾಕ್‌ವೆಲ್‌ಗೆ ಪಂಪ್‌ಸೆಟ್‌ಗಳನ್ನು ಅಳವಡಿಸಿದ್ದರು. ಲಕ್ಷ್ಮೇಶ್ವರ ಸೇರಿ ಗದಗ, ಶಿರಹಟ್ಟಿ, ಮುಂಡರಗಿ ತಾಲೂಕಿಗೆ ತುಂಗಭದ್ರಾ ನದಿ ನೀರೇ ಆಧಾರವಾಗಿದೆ. ಭದ್ರಾ ಜಲಾಶಯದಲ್ಲಿ ನೀರಿನ ಕೊರತೆಯ ನಡುವೆಯೂ ಕುಡಿಯುವ ನೀರಿಗಾಗಿ ನದಿಗೆ ಬಿಟ್ಟಿರುವ ನೀರನ್ನು ಇನ್ನೂ 4 ತಿಂಗಳು ಮಳೆಗಾಲದವರೆಗೂ ಕಾಪಾಡಬೇಕಾಗಿದೆ.

ಇಂತಹ ಸಂದರ್ಭದಲ್ಲಿ ನದಿ ಪಾತ್ರದ ರೈತರು ಪಂಪ್‌ಸೆಟ್ ಮೂಲಕ ಯಥೇಚ್ಛವಾಗಿ ನೀರೆತ್ತುವುದರಿಂದ ಜನತೆ ಕುಡಿಯುವ ನೀರಿಗಾಗಿ ಪರಿತಪಿಸಬೇಕಾಗುತ್ತದೆ. ನದಿಯಿಂದ ನೀರೆತ್ತುವ ಜಾಕ್‌ವೆಲ್ ಹತ್ತಿರ ನೀರು ಸಂಗ್ರಹಿಸುವ ಯಾವುದೇ ಮುಂಜಾಗೃತಾ ಕ್ರಮ ಕೈಗೊಂಡಿಲ್ಲ. ಜಾಕ್‌ವೆಲ್‌ಗೆ ಅನಧಿಕೃತ ಪಂಪ್‌ಸೆಟ್‌ಗಳನ್ನು ಅಳವಡಿಸಿದ್ದರೂ ನಿರ್ಲಕ್ಷ್ಯ ತಾಳಲಾಗಿತ್ತು. ಹೀಗೆಯೇ ಮುಂದುವರೆದರೆ ಜನತೆ ನೀರಿಗಾಗಿ ನಿತ್ಯ ಬಡಿದಾಡಬೇಕಾದ ಪರಿಸ್ಥಿತಿ ನಿರ್ಮಾಣವಾಗಲಿದೆ. ಈ ನಿಟ್ಟಿನಲ್ಲಿ ಜಿಲ್ಲಾಧಿಕಾರಿಗಳ ಸೂಚನೆ ಪಾಲಿಸಿ, ಸಂಬಂಧಿಸಿದ ಅಧಿಕಾರಿಗಳು ಅನಧಿಕೃತ ಪಂಪ್‌ಸೆಟ್‌ಗಳನ್ನು ತೆರವುಗೊಳಿಸಬೇಕು ಎಂದು ಸಾರ್ವಜನಿಕರು ಒತ್ತಾಯಿಸಿದ್ದರು. ಈ ಬಗ್ಗೆ ಜಿಲ್ಲಾಧಿಕಾರಿಗಳು ಪ್ರತಿ ಸಭೆಯಲ್ಲಿ ಅಧಿಕಾರಿಗಳಿಗೆ ಖಡಕ್ ಸೂಚನೆ ನೀಡಿದ್ದರು.

ಬುಧವಾರ ಬೆಳಿಗ್ಗೆಯೇ ತಹಸೀಲ್ದಾರ ವಾಸುದೇವ ಸ್ವಾಮಿ, ಪುರಸಭೆ ಮುಖ್ಯಾಧಿಕಾರಿ ಮಹೇಶ ಹಡಪದ, ಹೆಸ್ಕಾಂ ಅಧಿಕಾರಿ ಗುರುರಾಜ ಸಿ, ಕಂದಾಯ ನಿರೀಕ್ಷಕ ಬಿ.ಎಂ. ಕಾತರಾಳ, ಮಂಜುನಾಥ ಮುದಗಲ್ ಅವರು ತಮ್ಮ ಸಿಬ್ಬಂದಿ ಮತ್ತು ಪೊಲೀಸರೊಂದಿಗೆ ತೆರಳಿ ಅನಧಿಕೃತ ಪಂಪ್‌ಸೆಟ್ ತೆರವುಗೊಳಿಸುವ ಕಾರ್ಯಕ್ಕೆ ಮುಂದಾದರು.

ಈ ವೇಳೆ ಆಗಮಿಸಿದ ರೈತರು ಪಂಪ್‌ಸೆಟ್ ತೆರವುಗಳಿಸದಂತೆ ಅಡ್ಡಿಪಡಿಸಿದ್ದರಿಂದ ಮಾತಿನ ಚಕಮಕಿಯೂ ನಡೆಯಿತು. ಅತ್ತ ರೈತರು ಹೆಸ್ಕಾಂ ಕಚೇರಿಯೆದುರು ಪ್ರತಿಭಟನೆಗೂ ಮುಂದಾದರು. ರೈತರ ಹಿತ ಕಾಪಾಡುವುದು ಅಧಿಕಾರಿಗಳ ಜವಾಬ್ದಾರಿ. ಲಕ್ಷಾಂತರ ರೂ ಖರ್ಚು ಮಾಡಿ ಬೆಳೆದ ಬೆಳೆಗೆ ನೀರು ನಿಲ್ಲಿಸಿದರೆ ರೈತರು ಸಂಕಷ್ಟಕ್ಕೀಡಾಗುತ್ತಾರೆ. ಇಂತಹ ಸಂದರ್ಭದಲ್ಲಿ ಸರ್ಕಾರ ಈ ಭಾಗದ ರೈತರಿಗೆ ನಯಾಪೈಸೆ ಪರಿಹಾರವನ್ನೂ ಕೊಡುವುದಿಲ್ಲ. ನಾವು ಸತ್ತರೂ ಸರಿ ಪಂಪ್‌ಸೆಟ್ ತೆರವುಗೊಳಿಸುವುದಿಲ್ಲ ಎಂದ್ರೈತರು ಪಟ್ಟು ಹಿಡಿದರು.

ಈ ವೇಳೆ ಅಧಿಕಾರಿಗಳು ಕುಡಿಯುವ ನೀರಿಗೆ ಸಮಸ್ಯೆ ಇದ್ದಾಗ ರೈತರು ಪಂಪ್‌ಸೆಟ್‌ನಿಂದ ನೀರತ್ತದಂತೆ ತಡೆಯಬೇಕು ಎಂದು ಸರ್ಕಾರದ ಆದೇಶವಿದೆ. ಜಿಲ್ಲೆಯ 5 ತಾಲೂಕುಗಳ ಜನರು ನೀರಿಗಾಗಿ ಪರದಾಡುವ ಸ್ಥಿತಿಯಿದೆ. ಅವರೂ ನಿಮ್ಮ ಬಂಧುಗಳೇ. ಜೀವ ಇದ್ದರೆ ಜೀವನ. ಆದ್ದರಿಂದ ಮಳೆಗಾಲದವರೆಗೂ ನದಿ ಪಾತ್ರ ರೈತರು ಪಂಪ್‌ಸೆಟ್ ಅಳವಡಿಸದಂತೆ ಸಹಕಾರ ನೀಡಿ ಎಂದು ತಿಳಿ ಹೇಳಿದ ಬಳಿಕ ಪಂಪ್‌ಸೆಟ್ ತೆರವುಗೊಳಿಸಲು ಒಪ್ಪಿದರು.

> ಪ್ರತಿ ವರ್ಷ ಬೇಸಿಗೆಯಲ್ಲಿ ನಾಲ್ಕೈದು ತಿಂಗಳು ನದಿ ನೀರು ಸರಬರಾಜಿನಲ್ಲಿ ವ್ಯತ್ಯಯ ಸಾಮಾನ್ಯವಾಗಿದೆ. ಈ ವರ್ಷ ಮಳೆ ಕೊರತೆ, ಅಂತರ್ಜಲಮಟ್ಟ ಕುಸಿತ, ಕೆರೆ-ಕಟ್ಟೆಗಳಲ್ಲ ಹನಿ ನೀರು ಇಲ್ಲದ್ದರಿಂದ ಸಮಸ್ಯೆ ಮತ್ತಷ್ಟುಟ್ಟೆಹ್ಚಾಗಿದೆ. ನದಿಯಲ್ಲಿ ನೀರಿನ ಪ್ರಮಾಣ ಕಡಿಮೆಯಿದ್ದು, ಇದ್ದ ನೀರನ್ನೇ ಕಾಪಾಡಲು ಪಂಪ್‌ಹೌಸ್ ಹತ್ತಿರ ನದಿಗೆ ಅಡ್ಡಲಾಗಿ ತಾತ್ಕಾಲಿಕವಾಗಿ ಸ್ಯಾಂಡ್ ಬ್ಯಾರೇಜ್ ನಿರ್ಮಿಸಲು ಅನುದಾನ ಕೋರಿ ಜಿಲ್ಲಾಧಿಕಾರಿಗಳಿಗೆ ಮತ್ತು ಪಂಪ್‌ಸೆಟ್ ಅಳವಡಿಸದಂತೆ ಕಾಯಲು ಪೊಲೀಸ್ ಸಿಬ್ಬಂದಿಗಳನ್ನುನಿಯೋಜಿಸುವಂತೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಮನವಿ ಮಾಡಿಕೊಳ್ಳಲಾಗುವುದು.
>
> – **ವಾಸುದೇವ ಸ್ವಾಮಿ,** ತಹಸೀಲ್ದಾರರು.
> **ಮಹೇಶ ಹೆಚ್,** ಮುಖ್ಯಾಧಿಕಾರಿ.

ಜನಸಾಮಾನ್ಯರ ಅಹವಾಲುಗಳಿಗೆ ಸ್ಪಂದಿಸಿ

▶▶ ಮೊದಲನೇ ಪುಟದಿಂದ

ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ ಮಾತನಾಡಿ, ಕಳೆದೆರಡು ತಿಂಗಳಿಂದ ಗ್ರಾಮೀಣ ಭಾಗದ ಕೆಲವೆಡೆ ಕುಡಿಯುವ ನೀರಿನ ಅಭಾವ ಸೃಷ್ಟಿಯಾಗಿದ್ದು, ಸಮಸ್ಯೆ ಪರಿಹಾರಕ್ಕೆ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಕಾರ್ಯ ಪಾಲಕ ಅಭಿಯಂತರರಿಗೆ ಸೂಚಿಸಲಾಗಿದ್ದರೂ ಸಹ ನೆಪ ಹೇಳುತ್ತಾ ಕಾಮಗಾರಿಯನ್ನು ಕೈಗೊಳ್ಳಲು ವಿಳಂಬ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

ಸಭೆಯಲ್ಲಿ ತೆರಿಗೆ ಸಂಗ್ರಹ, ಕೂಸಿನ ಮನೆ, ನರೇಗಾ ಕಾಮಗಾರಿ, ಗ್ರಂಥಾಲಯಗಳ ಸೌಲಭ್ಯ, ಹಾಸ್ಟೆಲ್‌ಗಳಿಗೆ ಕುಡಿಯುವ ನೀರು ಪೂರೈಕೆ ಕುರಿತಂತೆ ಚರ್ಚಿಸಲಾಯಿತು. ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಜಿ.ಪಂ. ಉಪಕಾರ್ಯದರ್ಶಿ ಸಿ.ಬಿ. ದೇವರಮನಿ, ಪಂಚಾಯತ್ ರಾಜ್ ಕಾರ್ಯಪಾಲಕ ಅಭಿಯಂತರ ಎಸ್.ಆರ್. ಗೌಡರ, ಜಿ.ಪಂ. ಮುಖ್ಯ ಲೆಕ್ಕಾಧಿಕಾರಿ ಪ್ರಶಾಂತ ಜೆ.ಸಿ, ಪಶುಸಂಗೋಪನಾ ಇಲಾಖೆಯ ಉಪನಿರ್ದೇಶಕ ಡಾ. ಹುಲಗುಣ್ಣವರ, ತೋಟಗಾರಿಕೆ ಇಲಾಖೆ ಉಪನಿರ್ದೇಶಕ ಶಶಿಕಾಂತ ಕೋಟಿಮನಿ, ತೋಟಗಾರಿಕೆ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕ ಕರಿಯಲ್ಲಪ್ಪ ಕೆ ಸೇರಿದಂತೆ ತಾ.ಪಂ. ಕಾರ್ಯನಿರ್ವಾಹಕ ಅಧಿಕಾರಿಗಳು ಹಾಜರಿದ್ದರು.

ಶಿಕ್ಷಣದೊಂದಿಗೆ ಉದ್ಯೋಗ ವ್ಯವಸ್ಥೆ ಬಲಗೊಳ್ಳಲಿ

▶▶ ಮೊದಲನೇ ಪುಟದಿಂದ

ಜನತೆ ವಲಸೆ ಹೋಗುವುದನ್ನು ತಡೆಯಬೇಕಾದರೆ ಗ್ರಾಮಗಳಲ್ಲಿ ಉದ್ಯೋಗ ಸೃಷ್ಟಿಯಾಗಬೇಕು. ಗ್ರಾಮ ಅಭಿವೃದ್ಧಿಯಿಂದ ಇಡೀ ಸಮಾಜದ ಅಭಿವೃದ್ಧಿ ಸಾಧ್ಯ ಎಂದು ಹೇಳಿದರು. ಈ ವಿಶ್ವವಿದ್ಯಾಲಯವು ಭಾರತದಲ್ಲೇ ಒಂದು ವಿಶಿಷ್ಟವಾದ ವಿಶ್ವವಿದ್ಯಾಲಯವಾಗಿದ್ದು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಷಯವನ್ನು ಪರಿಗಣಿಸುತ್ತಿದೆ. ಈ ಘಟಿಕೋತ್ಸವ ಸಮಾರಂಭದಲ್ಲಿ ಸಿ. ನಾರಾಯಣ ಸ್ವಾಮಿ ಮತ್ತು ಚಿರಂಜೀವಿ ಸಿಂಗ್ ಅವರಿಗೆ ಗೌರವ ಡಾಕ್ಟರೇಟ್ ನೀಡಿ ಗೌರವಿಸಲಾಗಿದ್ದು, ಅವರ ಸೇವೆ ನಿರಂತರವಾಗಿರಲಿ ಎಂದು ಆಶಿಸುತ್ತೇನೆ ಎಂದರು. ಸಚಿವ ಪ್ರಿಯಾಂಕ್ ಖರ್ಗೆ, ಕೇಂದ್ರ ಪಂಚಾಯತ್ ರಾಜ್ ಸಚಿವಾಲಯದ ಮಾಜಿ ಜಂಟಿ ಕಾರ್ಯದರ್ಶಿ ಟಿ.ಆರ್. ರಘುನಂದನ್, ವಿವಿ ಕುಲಪತಿ ವಿಷ್ಣುಕಾಂತ್ ಎಸ್.ಚಟಪಲ್ಲಿ ಮುಂತಾದ ಗಣ್ಯರು ಸಮಾರಂಭದಲ್ಲಿ ಹಾಜರಿದ್ದರು.

ಪ್ರಾಮಾಣಿಕವಾಗಿ ವಿದ್ಯೆ ಕಲಿತಾಗ ಯಶಸ್ಸು

■ ವಿಜಯಸಾಕ್ಷಿ ಸುದ್ದಿ, ಗದಗ

ಶ್ರದ್ಧೆ ಮತ್ತು ಪ್ರಾಮಾಣಿಕವಾಗಿ ವಿದ್ಯೆಯನ್ನು ಕಲಿತಾಗ ಮಾತ್ರ ಯಶಸ್ಸು ಹಾಗೂ ಶ್ರೇಯಸ್ಸು ದೊರೆಯುತ್ತದೆ. ಪಾಲಕರು ವಿದ್ಯಾರ್ಥಿಗಳ ಬೆಳವಣಿಗೆಗೆ ಪ್ರೋತ್ಸಾಹ ನೀಡಿದಾಗ ವಿದ್ಯಾರ್ಥಿಗಳ ಭವಿಷ್ಯ ಉಜ್ವಲಗೊಂಡು ಸಮಾಜದಲ್ಲಿ ಉನ್ನತ ಸ್ಥಾನ ಪಡೆದಕೊಳ್ಳಲು ಸಾದ್ಯವಾಗುತ್ತದೆ ಎಂದು ಜೈವಿಜಯ ಕಂಪ್ಯೂಟರ್ ಶಿಕ್ಷಣ ತರಬೇತಿ ಸಂಸ್ಥೆಯ ಮುಖ್ಯಸ್ಥ ಮಂಜುನಾಥ ಗೌಡರ ಹೇಳಿದರು.

ಅವರು ಚಿಕ್ಕಹಂದಿಗೋಳದ ವೆಂಕಟೇಶ್ವರ ಪ್ರೌಢಶಾಲೆಯಲ್ಲಿ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳ ಬಿಳ್ಕೋಡುಗೆ ಸಮಾರಂಭದಲ್ಲಿ ಅತಿಥಿಯಾಗಿ ಭಾಗವಹಿಸಿ ಮಾತನಾಡಿದರು.

ಚಿಕ್ಕಹಂದಿಗೋಳ ಗ್ರಾ.ಪಂ ಸದಸ್ಯ ಶ್ರೀನಿವಾಸ ದ್ಯಾವನೂರ ಪ್ರಾಸ್ತಾವಿಕವಾಗಿ ಮಾತನಾಡಿದರು. ಈ ವೇಳೆ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಉತ್ತಮ ಅಂಕ ಗಳಿಸಿ ಪ್ರಥಮ ಸ್

ಶಿವರಾತ್ರಿ ವಿಶೇಷ ಧಾರ್ಮಿಕ ಕಾರ್ಯಕ್ರಮಗಳು, ಧರ್ಮಜಾಗೃತಿ ಸಮಾರಂಭ

ಮುಕ್ತಿಮಂದಿರದಲ್ಲಿ ಮಹಾಶಿವರಾತ್ರಿ ಮಹೋತ್ಸವ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಮುಕ್ತಿಮಂದಿರ ಧರ್ಮಕ್ಷೇತ್ರದ ಜಾತ್ರಾಮಹೋತ್ಸವ ಅಂಗವಾಗಿ ಮಾ.8ರಿಂದ 10ರವರೆಗೆ ಶ್ರೀಕ್ಷೇತ್ರದಲ್ಲಿ ಮುಕ್ತಿಮಂದಿರದ ಪಟ್ಟಾಧ್ಯಕ್ಷರಾದ ಶ್ರೀ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯ ನೇತೃತ್ವದಲ್ಲಿ ಮಹಾಶಿವರಾತ್ರಿ ಜಾತ್ರಾ ಮಹೋತ್ಸವ ಮತ್ತು ವಿಶೇಷ ಧಾರ್ಮಿಕ ಕಾರ್ಯಕ್ರಮಗಳು, ಧರ್ಮಜಾಗೃತಿ ಸಮಾರಂಭ ಜರುಗಲಿದೆ.

ಈ ಕುರಿತು ಮಾಹಿತಿ ನೀಡಿದ ಮುಕ್ತಿಮಂದಿರದ ಪಟ್ಟಾಧ್ಯಕ್ಷರಾದ ಶ್ರೀ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯರು, ಪ್ರತಿವರ್ಷದಂತೆ ಶ್ರೀ ಕ್ಷೇತ್ರದಲ್ಲಿ ಶಿವರಾತ್ರಿಯ ನಿಮಿತ್ಯ ಲೋಕೋತ್ತರ ಶಿವಪೂಜೆಯು ನಡೆಯಲಿದೆ. ತ್ರಿಕೋಟಿ ಶಿವಲಿಂಗ ಸ್ಥಾಪನೆ ಸಿದ್ಧತೆ ಹಿನ್ನೆಲೆಯಲ್ಲಿ ಮುಕ್ತಿಮಂದಿರದಲ್ಲಿ ಈ ಬಾರಿಯ ಜಾತ್ರಾ ಮಹೋತ್ಸವಕ್ಕೆ ಸಾಕಷ್ಟು ಪ್ರಮಾಣದ ಭಕ್ತ ಸಮೂಹ ಹರಿದು ಬರಲಿದೆ.

ಶಿವರಾತ್ರಿಯ ಜಾತ್ರಾಮಹೋತ್ಸವ ಅಂಗವಾಗಿ ಮಾ. 8ರಂದು ಪ್ರಾತಃಕಾಲ ಶ್ರೀ ಜಗದ್ಗುರು ಪಂಚಾಚಾರ್ಯ ಧ್ವಜಾರೋಹಣ, ಲಿಂ. ವೀರಗಂಗಾಧರ ಜಗದ್ಗುರುಗಳ ಗದ್ದುಗೆಗೆ ಮಹಾರುದ್ರಾಭಿಷೇಕ, ಸಹಸ್ರ ಬಿಲ್ವಾರ್ಚನೆ, ಮಹಾಮಂಗಳಾರತಿ, ಬೆಳಿಗ್ಗೆ 9ಕ್ಕೆ ಶಿವದೀಕ್ಷೆ, ಅಯ್ಯಾಚಾರ ಜರುಗುವುದು. ಸಂಜೆ 5ಕ್ಕೆ ಜ. ಪಂಡಿತಾರಾಧ್ಯರ ಮತ್ತು ವಿಶ್ವಾರಾಧ್ಯರ ಜಯಂತಿ ನಿಮಿತ್ತ ರಥೋತ್ಸವ ಜರುಗುವುದು. ರಾತ್ರಿ ಮಾನವ ಧರ್ಮ ಮಂಟಪದಲ್ಲಿ ಜ.ರೇಣುಕಾಚಾರ್ಯರು, ಶ್ರೀ ಜಗದ್ಗುರುಗಳವರ ಮಂಗಳಮೂರ್ತಿಗೆ ಮಹಾರುದ್ರಾಭಿಷೇಕ, ಪಟ್ಟಾಧ್ಯಕ್ಷರ ಸಡಗರದ ಮಹಾಶಿವಪೂಜೆ, ನಾಮಸ್ಮರಣೆ ಜರುಗಲಿದೆ.

ಮಾ.9ರಂದು ವಿಶೇಷ ಪೂಜಾ ಕಾರ್ಯಕ್ರಮ, ಸಂಜೆ ಶಿವ ಪಾರ್ವತಿ ಮಹಾರಥೋತ್ಸವ, ಧರ್ಮಸಭೆ ನಡೆಯಲಿದೆ. ಮಾ.10ರಂದು ಅಮವಾಸ್ಯೆ ವೃತಾಚರಣೆ, ಬೆಳಿಗ್ಗೆ ಶ್ರೀ ರಂಭಾಪುರಿ ಜಗದ್ಗುರುಗಳ ಕತೃ ಗದ್ದುಗೆಗೆ ಮಹಾಪೂಜಾ ಕೈಂಕರ್ಯಗಳು, ಮಧ್ಯಾಹ್ನ 12ಕ್ಕೆ ಸುಲ್ತಾನಪುರ ಗ್ರಾಮಸ್ಥರಿಂದ ವಿಶ್ವಶಕ್ತಿ ಭಾವಚಿತ್ರದ ಮೆರವಣಿಗೆ, 3ಕ್ಕೆ ಲಿಂ. ಜ.ವೀರಗಂಗಾಧರರ ಮಹಾಮಂಗಲ ಮೂರ್ತಿಯ ಅಡ್ಡಪಲ್ಲಕ್ಕಿ ಮಹೋತ್ಸವ, ಕಡುಬಿನ ಕಾಳಗ, ಅನ್ನದ ಹೊಳೆ-ಹೊನ್ನಿನ ಮಳೆ ಜರುಗುವುದು. ಸಂಜೆ 4ಕ್ಕೆ ಬಾಳೇಹೊನ್ನೂರ ಶ್ರೀ ರಂಭಾಪುರಿ ಜಗದ್ಗುರು ಡಾ. ವೀರಸೋಮೇಶ್ವರ ಶಿವಾಚಾರ್ಯ ಭಗವತ್ಪಾದಂಗಳವರ ದಿವ್ಯಸಾನಿಧ್ಯದಲ್ಲಿ ಧರ್ಮಜಾಗೃತಿ ಸಮಾರಂಭ ಜರುಗಲಿದೆ. ನಾಡಿನ ಹರಗುರುಚರಮೂರ್ತಿಗಳು, ಮಂತ್ರಿಗಳು, ಶಾಸಕರು, ರಾಜಕಾರಣಿಗಳು, ಗಣ್ಯಮಾನ್ಯರು ಸೇರಿ ಅಪಾರ ಭಕ್ತಸಮೂಹ ಪಾಲ್ಗೊಳ್ಳಲಿದೆ ಎಂದು ಪಟ್ಟಾಧ್ಯಕ್ಷರು ತಿಳಿಸಿದರು.

ಪ್ರೌಢಶಾಲಾ ಸಹಕಾರ ಸಂಘದ ಚುನಾವಣೆ

■ ವಿಜಯಸಾಕ್ಷಿ ಸುದ್ದಿ, ಗದಗ

ಸರಕಾರಿ ಪ್ರೌಢಶಾಲಾ ಹಾಲಿ ಮತ್ತು ನಿವೃತ್ತ ನೌಕರರ ಪತ್ತಿನ ಸಹಕಾರ ಸಂಘ ಗದಗ ಸಂಸ್ಥೆಗೆ ನಡೆದ ಅಧ್ಯಕ್ಷ ಸ್ಥಾನದ ಚುನಾವಣೆಯಲ್ಲಿ ಕರ್ನಾಟಕ ರಾಜ್ಯ ಪ್ರೌಢಶಾಲಾ ಸಹ ಶಿಕ್ಷಕರ ಸಂಘದ ಗದಗ ಗ್ರಾಮೀಣ ಘಟಕದ ಅಧ್ಯಕ್ಷ ಬಿ.ಎಫ್. ಪೂಜಾರ ಅವಿರೋಧವಾಗಿ ಆಯ್ಕೆಯಾದರು. ಚುನಾವಣಾಧಿಕಾರಿಗಳಾಗಿ ಸಹಕಾರ ಇಲಾಖೆಯ ಬೇವಿನಕಟ್ಟಿಯವರು ಕಾರ್ಯನಿರ್ವಹಿಸಿದರು.

ಈ ಸಂದರ್ಭದಲ್ಲಿ ಪ್ರೌಢಶಾಲಾ ಸಹ ಶಿಕ್ಷಕರ ಸಂಘದ ಗದಗ ಶಹರ ಘಟಕದ ಅಧ್ಯಕ್ಷ ಎಸ್.ಸಿ. ನಾಗರಳ್ಳಿ, ಸಂಘದ ಗೌರವ ಕಾರ್ಯದರ್ಶಿ ಬಿ.ಎಚ್. ಯಲ್ಲಪ್ಪಗೌಡ್ರ, ಉಪಾಧ್ಯಕ್ಷ ಎಮ್. ಆರ್. ಇಂಗಳಳ್ಳಿ, ಆಡಳಿತ ಮಂಡಳಿಯ ನಿರ್ದೇಶಕರಾದ ಎಮ್.ಎಸ್. ಕುಚಬಾಳ, ಎಮ್. ಎಮ್. ಹಳಪೇಟಿ, ಶ್ರೀಕಾಂತ ಬಡ್ಡೂರ, ಎಮ್.ಎಫ್. ಪಾಟೀಲ, ಎ.ಟಿ. ಮೇಗಡಿ, ಕೆ.ಎ. ಉಪ್ಪಿನ, ಎಮ್.ಎಸ್. ಧಾರವಾಡ, ಬಿ.ಪಿ. ಪೊಲೀಸಪಾಟೀಲ, ಎ.ಜಿ. ಅಳವಂಡಿ, ಆರ್.ಜಿ. ನಾಯ್ಕರ ಉಪಸ್ಥಿತರಿದ್ದರು.

ಪ್ರೌಢಶಾಲಾ ಸಹ ಶಿಕ್ಷಕರ ಸಂಘದ ಪದಾಧಿಕಾರಿಗಳಾದ ರವಿರಾಜ ಪವಾರ, ಎಮ್.ಎ. ಯರಗುಡಿ, ಮುತ್ತು ಗಾರವಾಡ, ಪಿ.ಪಿ. ಟಿಕಾರೆ ಮುಂತಾದವರು ಭಾಗವಹಿಸಿ, ಶುಭ ಕೋರಿದರು.

ಮಹಿಳೆಯರು ಎಲ್ಲರಿಗೂ ಪ್ರೇರಣೆ

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಅನಾದಿ ಕಾಲದಿಂಸಲೂ ಮಹಿಳೆಯರು ಎಲ್ಲರಿಗೂ ಪ್ರೇರಣೆಯ ರೂಪವಾಗಿದ್ದಾರೆ ಎಂದು ಶೋಭಾ ಪಾಟೀಲ್ ಹೇಳಿದರು.

ಅವರು ಪಟ್ಟಣದ ಬಾಲಲೀಲಾ ಮಾಹಾಂತ ಶಿವಯೋಗಿಗಳ ಗವಿಮಠದ ಆವರಣದಲ್ಲಿ ಮಾಹಾಶಿವರಾತ್ರಿ ಅಂಗವಾಗಿ ಪ್ರಜಾಪಿತ ಬ್ರಹ್ಮಕುಮಾರಿ ವಿಶ್ವವಿದ್ಯಾಲಯದಿಂದ ಜರುಗಿದ ಮಹಿಳಾ ದಿನಾಚರಣೆ ನಿಮಿತ್ಯ ಸನ್ಮಾನ ಸ್ವೀಕರಿಸಿ ಮಾತನಾಡಿದರು.

ಮಹಿಳೆ ಸಹನಾ ಮೂರ್ತಿ, ಕರುಣಾಮಯಿ, ತ್ಯಾಗಮಯಿ, ಅನ್ನಪೂರ್ಣೆಶ್ವರಿ, ದೇಶ ಪ್ರೇಮಿ, ನಿಸ್ವಾರ್ಥ ಸೇವಾ ಮೂರ್ತಿಯಾಗಿ ಸಮಾಜದ, ಕುಟುಂಬದ ಕಣ್ಣಾಗಿ ಕಾಯಕಯೋಗಿಯಾಗಿದ್ದಾಳೆ. ಇಂದು ಮಹಿಳೆ ಎಲ್ಲಾ ರಂಗದಲ್ಲೂ ಸಾಧನೆ ಮಾಡಿದ್ದು, ಬ್ರಹ್ಮಕುಮಾರಿ ಈಶ್ವರಿ ವಿಶ್ವವಿದ್ಯಾಲಯ ನಮ್ಮ ಪರಂಪರೆ, ಸಂಸ್ಕೃತಿ ಉಳಿಸಿ ಬೆಳಸುವ ಕಾರ್ಯ ಮಾಡುತ್ತಿರುವುದು ಶ್ಲಾಘನೀಯ ಎಂದರು.

ಕಾರ್ಯಕ್ರಮದ ನೇತೃತ್ವವನ್ನು ರಾಜಯೋಗಿನಿ ಡಾ. ಪದ್ಮಾಜಿ ವಹಿಸಿದ್ದರು. ರಾಜಯೋಗಿನಿ ಬಿ.ಕೆ. ಶಿವಾನಿ, ಮಂಗಳಾ ನೀಲಗುಂದ, ಹರ್ಷಿತಾ ದೇಶಪಾಂಡೆ, ಅಕ್ಕಮ್ಮಾ ನೀಲಗುಂದ, ಜಯಶ್ರೀ ಲಕ್ಕುಂಡಿ, ಶೇಖವ್ವ ಬೋಳನವರ, ನೀಲಮ್ಮಾ ಕುರ್ತಕೋಟಿ, ಗೀತಾ ಜಾಧಾವ, ಕವಿತಾ ದೊಟಿಕಲ್, ಪ್ರಕಾಶ ಮದ್ದಿನ, ರಾಜಯೋಗಿನಿ ನಾಗಲಾಂಬಿಕೆ ಅಕ್ಕ, ಸುಮನ್ ಚವಡಿ ಮುಂತಾದವರಿದ್ದರು.

ರಾಷ್ಟ್ರಮಟ್ಟದ ಕೋಡ್ ಫಿಯಿಸ್ಟಾ-4.0

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಶ್ರೀಮತಿ ಕಮಲಾ ಮತ್ತು ವೆಂಕಪ್ಪ ಎಂ.ಅಗಡಿ ಇಂಜಿನಿಯರಿಂಗ್ ಕಾಲೇಜಿನಲ್ಲಿ ಕಂಪ್ಯೂಟರ್ ಸೈನ್ಸ್ ವಿಭಾಗದಿಂದ ರಾಷ್ಟ್ರಮಟ್ಟದ ಕೋಡ್ ಫಿಯಿಸ್ಟಾ-4.0 ನಿರಂತರ 24 ತಾಸುಗಳ ಹ್ಯಾಕಥಾನ್ ಸ್ಪರ್ಧೆ ಇತ್ತೀಚೆಗೆ ಜರುಗಿತು.

ಬೆಳಗಾವಿಯ ಗೊಗಟೆ ಇಂಜಿನಿಯರಿಂಗ್ ಕಾಲೇಜಿನ ವಿದ್ಯಾರ್ಥಿಗಳಾದ ಅರುಣ ಪುಸ್ಕರ್, ಪ್ರಥಮ ಎಸ್, ಶ್ರೀರಾಮ ನಾಯಕ, ಪ್ರಭಾಲ ಎ.ಬಿ ಅವರನ್ನೊಳಗೊಂಡ ತಂಡವು ಪ್ರಥಮ ಸ್ಥಾನ ಗಳಿಸಿತು. ಲಕ್ಷ್ಮೇಶ್ವರದ ಅಗಡಿ ಇಂಜಿನಿಯರಿಂಗ್ ಕಾಲೇಜಿನ ವಿದ್ಯಾರ್ಥಿಗಳಾದ ಅಮೃತೇಶ ಎನ್, ಶಿವಕುಮಾರ ಸಂಶಿ, ವಿನಾಯಕ ಕೆ, ಮಣಿಕಂಠ ಎಚ್ ಅವರನ್ನೊಳಗೊಂಡ ತಂಡವು ದ್ವಿತೀಯ ಸ್ಥಾನ ಹಾಗೂ ಗದಗದ ತೋಂಟದಾರ್ಯ ಇಂಜಿನಿಯರಿಂಗ್ ಕಾಲೇಜಿನ ವಿದ್ಯಾರ್ಥಿಗಳಾದ ನಂದೀಶ ಕೆ, ಚನ್ನವೀರಗೌಡ ಪಾಟೀಲ, ಸೀಮಾ ಕುಲಕರ್ಣಿ, ಪಿಲೋಮೀನಾ ಕಂಬಳಿ ತಂಡವು ತೃತೀಯ ಸ್ಥಾನ ಪಡೆಯಿತು.

ಒಟ್ಟು 50ಕ್ಕೂ ಹೆಚ್ಚು ಕಾಲೇಜುಗಳಿಂದ 200ಕ್ಕೂ ಹೆಚ್ಚು ವಿದ್ಯಾರ್ಥಿಗಳು ಸ್ಪರ್ಧೆಯಲ್ಲಿ ಭಾಗವಹಿಸಿದ್ದರು. ಅಂಬಾ ಸಾಫ್ಟವೇರ್ ಸೊಲ್ಯೂಷನ್ ಸಂಸ್ಥಾಪಕ ಪ್ರಶಾಂತ ಅಸ್ಕೆಕರ, ಗುರುರಾಜ ನಾಯಕ, ಶೀತಲ್ ನಿರ್ಣಾಯಕರಾಗಿದ್ದರು. ಮಹಾವಿದ್ಯಾಲಯದ ಪ್ರಾಚಾರ್ಯ ಡಾ.ಪರಶುರಾಮ ಬಾರ್ಕಿ ಪ್ರಶಸ್ತಿ ವಿತರಿಸಿದರು.

ಕಂಪ್ಯೂಟರ್ ಸೈನ್ಸ್ ವಿಭಾಗದ ಪ್ರೊ. ವಿಕ್ರಮ ಶಿರೋಳ, ಸಂಯೋಜಕರಾದ ಪ್ರಕಾಶ ಹೊಂಗಲ್, ರಾಜೇಶ್ವರಿ ಗಾಮನಗಟ್ಟಿ, ಶ್ರೀಕಾಂತ ಜೋಗರ, ಅರುಣ ಜೋಶಿ, ಸಾಯಿರಾಜ ಕೆ, ಪ್ರಿಯಾಂಕ ರಾಯರೆಡ್ಡಿ, ವೆಂಕಟೇಶ್ ಎಂ ಕಾರ್ಯಕ್ರಮ ನಿರ್ವಹಿಸಿದರು.

ಕೆ.ಎಸ್.ಆರ್.ಡಿ.ಪಿ.ಆರ್. 4ನೇ ಘಟಿಕೋತ್ಸವದಲ್ಲಿ ಸಚಿವ ಪ್ರಿಯಾಂಕ್ ಖರ್ಗೆ

ಕೆಲಸ ಕೇಳುವವರಾಗಬೇಡಿ, ನೀಡುವವರಾಗಿ

■ ವಿಜಯಸಾಕ್ಷಿ ಸುದ್ದಿ, ಗದಗ

ಗ್ರಾಮೀಣಾಭಿವೃದ್ಧಿ, ಪಂಚಾಯತ್ ರಾಜ್ ವಿಶ್ವ ವಿದ್ಯಾಲಯದಲ್ಲಿ ಶಿಕ್ಷಣ ಪಡೆದ ವಿದ್ಯಾರ್ಥಿಗಳು ಮಾನವೀಯತೆಯ ಮೌಲ್ಯಗಳನ್ನು ಅಳವಡಿಸಿಕೊಂಡು ಸೇವೆ ನೀಡಬೇಕು. ಕೆಲಸ ಕೇಳುವವರಾಗದೇ ನೀಡುವವರಾಗಬೇಕೆಂದು ವಿಶ್ವ ವಿದ್ಯಾಲಯದ ಕುಲಾಧಿಪತಿಗಳು ಆಗಿರುವ ಗ್ರಾಮೀಣಾಭಿವೃದ್ಧಿ-ಪಂಚಾಯತ್ ರಾಜ್ ಇಲಾಖೆಯ ಸಚಿವ ಪ್ರಿಯಾಂಕ್ ಖರ್ಗೆ ಕರೆ ನೀಡಿದರು.

ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ವಿಶ್ವವಿದ್ಯಾಲಯದ 4ನೇ ಘಟಿಕೋತ್ಸವ ಸಮಾರಂಭದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಬಹುತೇಕ ಗ್ರಾಮೀಣ ಪ್ರದೇಶದಿಂದ ಬಂದಿರುವ ಯುವ ವಿದ್ಯಾರ್ಥಿಗಳಿಗೆ ಘಟಿಕೋತ್ಸವ ಅವಿಸ್ಮರಣೀಯ ಹಾಗೂ ಸಂತೃಪ್ತಿ ತರುವ ದಿನವಾಗಿದೆ. ಈ ಜ್ಞಾನ ಬಂಧಾರದಿಂದ ಜೀವನದ ಮೌಲ್ಯ, ಸಿದ್ಧಾಂತಗಳನ್ನು ತಮ್ಮೊಂದಿಗೆ ಕೊಂಡೊಯ್ಯಬೇಕು. ಸಾರ್ಥಕ ಜೀವನ ನಡೆಸುವ ಕನಸು ಮತ್ತು ಸಾಧಿಸಬೇಕೆಂಬ ಕಿಚ್ಚು ಹೊತ್ತು ಇಲ್ಲಿಂದ ಹೊರಡುತ್ತಿದ್ದೀರಿ. ನಿಮ್ಮೆಲ್ಲರಿಗೂ ಒಳ್ಳೆಯದಾಗಲಿ ಎಂದರು.

ಮಹಾತ್ಮ ಗಾಂಧೀಜಿಯವರ ಗ್ರಾಮ ಸ್ವರಾಜ ಪರಿಕಲ್ಪನೆಯನ್ನು ಸಾಕಾರಗೊಳಿಸುವ ನಿಟ್ಟಿನಲ್ಲಿ ಈ ಘಟಿಕೋತ್ಸವ ಮಹತ್ವದ ಹೆಜ್ಜೆಯಾಗಿದೆ. ವಿಶ್ವ ವಿದ್ಯಾಲಯದಲ್ಲಿ ಪಡೆದಿರುವ ಜ್ಞಾನ ಮತ್ತು ಕೌಶಲ್ಯವನ್ನು ಬಳಸಿಕೊಂಡು ಸಾಮಾಜಿಕ ಪರಿವರ್ತನೆ ತರುವುದು ನಿಮ್ಮೆಲ್ಲರ ಜವಾಬ್ದಾರಿ. ಗ್ರಾಮೀಣ ಪರಿವರ್ತನೆಯ ಸಂಕಲ್ಪ ಹೊತ್ತು ಸಾಗಿರುವ ನೀವೆಲ್ಲರೂ ವಿಶ್ವ ವಿದ್ಯಾಲಯದ ರಾಯಭಾರಿಗಳಾಗುತ್ತೀರಿ ಎಂದರು.

ಇಂದಿನ ಆಧುನಿಕ ಯುವ ಜನಾಂಗದ ಬಗ್ಗೆ ನನಗೆ ಸಂಪೂರ್ಣ ವಿಶ್ವಾಸವಿದೆ. ಸಮಸ್ಯೆಗಳನ್ನು ಸಂಪೂರ್ಣವಾಗಿ ಪರಿಹರಿಸಲು ಅವರು ಸಿಂಹಗಳಂತೆ ಶ್ರಮಿಸುತ್ತಾರೆ. ಕಲೆಗೆ ವಿಜ್ಞಾನ ಅಳವಡಿಸುವುದೇ ತಂತ್ರಜ್ಞಾನ ಎಂದು ಸರಳ ಭಾಷೆಯಲ್ಲಿ ಹೇಳಬಹುದು. ದೇಶದ ಆರ್ಥಿಕ ಪ್ರಗತಿಯಲ್ಲಿ ತಂತ್ರಜ್ಞಾನದ ಪಾತ್ರ ಪ್ರಮುಖವಾಗಿದೆ ಎಂದರು.

ಕೇಂದ್ರ ಸರ್ಕಾರ ಪಂಚಾಯತ್ ರಾಜ್ ಮಂತ್ರಾಲಯದ ಮಾಜಿ ಜಂಟಿ ಕಾರ್ಯದರ್ಶಿ ಡಾ. ಟಿ.ಆರ್. ರಘುನಂದನ್ ಘಟಿಕೋತ್ಸವದ ಭಾಷಣ ಮಾಡಿ, ಕೃಷಿ ವಲಯವು ಕುಂಠಿತವಾಗಿರುವ ಇಂದಿನ ಸಾಮಾಜಿಕ ಮತ್ತು ರಾಜಕೀಯ ಪರಿಸ್ಥಿತಿಯಲ್ಲಿ ಗ್ರಾಮೀಣ ಆರ್ಥಿಕತೆ ವಿಶೇಷವಾಗಿ, ಅಭಿವೃದ್ಧಿಗೆ ಆದ್ಯತೆ ನೀಡಬೇಕಾಗಿದೆ ಎಂದರು.

ನಾವೆಲ್ಲ ವಿವಿಧ ಸಾಮಾಜಿಕ, ಆರ್ಥಿಕ, ಧಾರ್ಮಿಕ, ಪ್ರಾದೇಶಿಕ ಮತ್ತು ಭಾಷಾ ಹಿನ್ನೆಲೆಯಿಂದ ಬಂದವರು. ವಿಭಜನೆಯನ್ನು ಉತ್ತೇಜಿಸಲು ಅಥವಾ ಏಕತೆಯನ್ನು ಉತ್ತೇಜಿಸಲು ನಾವು ಇವುಗಳನ್ನು ಬಳಸಬಹುದು. ನಿಮ್ಮ ವೈವಿಧ್ಯತೆಯು ಏಕತೆ, ಸಹಾನುಭೂತಿ ಮತ್ತು ದೇಶಭಕ್ತಿಗೆ ಅಡ್ಡಿ ಬಾರದಂತೆ ಖಚಿತಪಡಿಸಿಕೊಳ್ಳಲು ಸರಳವಾದ ಮಾರ್ಗವಿದೆ ಎಂದರು.

ಸಂವಿಧಾನವು ಸುಮಾರು 400 ವಿಧಿಗಳನ್ನು ಹೊಂದಿರುವ ಸುದೀರ್ಘ ದಾಖಲೆಯಾಗಿದೆ. ಅದೆಲ್ಲವನ್ನು ನೆನಪಿಟ್ಟುಕೊಳ್ಳುವ ಅಗತ್ಯವಿಲ್ಲ. ಏಕೆಂದರೆ ಇಡೀ ಸಂವಿಧಾನವನ್ನು 5 ಗಾಂಧೀ ತತ್ವಗಳಲ್ಲಿ ಸಂಕ್ಷಿಪ್ತಗೊಳಿಸಬಹುದು. ಅವುಗಳೆಂದರೆ ಸತ್ಯ, ಅಹಿಂಸೆ, ಸ್ವರಾಜ್, ಸರ್ವೋದಯ ಮತ್ತು ಅಂತ್ಯೋದಯ. ಈ ತತ್ವಗಳನ್ನು ಅನುಸರಿಸಲು ನಿಮಗೆ ಎರಡು ಪ್ರಮುಖ ಗುಣಲಕ್ಷಣಗಳು ಅಗತ್ಯವಾಗಿವೆ. ಅವುಗಳೆಂದರೆ ಧೈರ್ಯ ಮತ್ತು ತಾಳ್ಮೆ ಎಂದು ನೆರೆದ ವಿದ್ಯಾರ್ಥಿಗಳಿಗೆ ತಿಳಿಸಿದರು.

ಘಟಿಕೋತ್ಸವದಲ್ಲಿ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್, ಕುಲಪತಿ ಪ್ರೊ. ವಿಷ್ಣುಕಾಂತ ಚಟಪಲ್ಲಿ, ಕುಲಸಚಿವರಾದ ಡಾ. ಸುರೇಶ ನಾಡಗೌಡ್ರ ಉಪಸ್ಥಿತರಿದ್ದರು.

> ವಿಶ್ವವಿದ್ಯಾಲಯವು ಪಠ್ಯಕ್ರಮದಲ್ಲಿ ಶಿಕ್ಷಣ, ಸಂಶೋಧನೆ, ತರಬೇತಿ ಹಾಗೂ ವಿಸ್ತರಣಾ ಚಟುವಟಿಕೆಗಳನ್ನು ಅಳವಡಿಸಿಕೊಂಡಿದ್ದು, ಪಾರಂಪರಿಕ ಜ್ಞಾನ, ಆಧುನಿಕ ತಂತ್ರಜ್ಞಾನ ಮಿಶ್ರಿತ ಬೋಧನಾ ಕಲಿಕಾ ಕ್ರಮಗಳನ್ನು ಅನುಸರಿಸುತ್ತಿದೆ. ವಿಶ್ವ ವಿದ್ಯಾಲಯದ ಸ್ಥಾಪನೆಗೆ ಪ್ರೋತ್ಸಾಹ ಹಾಗೂ ಶ್ರಮಿಸಿದ ಮುಖ್ಯಮಂತ್ರಿ ಸಿದ್ಧರಾಮಯ್ಯ ಹಾಗೂ ಗದಗ ಜಿಲ್ಲೆಯ ಸಚಿವ ಡಾ. ಎಚ್.ಕೆ. ಪಾಟೀಲ ಅವರಿಗೆ ಸಚಿವ ಪ್ರಿಯಾಂಕ್ ಖರ್ಗೆ ಅಭಿನಂದನೆಗಳನ್ನು ಸಲ್ಲಿಸಿದರು.

ಹಣಕಾಸು ಅಯೋಗದ ಅಧ್ಯಕ್ಷ ಡಾ. ಸಿ ನಾರಾಯಣಸ್ವಾಮಿ ಸೂಚನೆ

ಲಭ್ಯವಿರುವ ಅನುದಾನ ಸದ್ಬಳಕೆ ಮಾಡಿಕೊಳ್ಳಿ

■ ವಿಜಯಸಾಕ್ಷಿ ಸುದ್ದಿ, ಗದಗ

5ನೇ ಹಣಕಾಸು ಆಯೋಗಕ್ಕೆ ಮುಕ್ತವಾಗಿ ಸಲಹೆ ಸೂಚನೆಗಳನ್ನು ಸ್ಥಳೀಯ ಸಂಸ್ಥೆಗಳು ನೀಡಬೇಕೆಂದು 5ನೇ ಹಣಕಾಸು ಅಯೋಗದ ಅಧ್ಯಕ್ಷರಾದ ಡಾ. ಸಿ ನಾರಾಯಣಸ್ವಾಮಿ ಹೇಳಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಭವನದಲ್ಲಿ ಬುಧವಾರ ಜರುಗಿದ ಸಭೆಯಲ್ಲಿ ಮಾತನಾಡಿದ ಅವರು, ದೇಶದ ಸರ್ವತೋಮುಖ ಅಭಿವೃದ್ಧಿಗೆ ಸ್ಥಳೀಯ ಸಂಸ್ಥೆಗಳ ಪಾತ್ರ ಪ್ರಧಾನವಾಗಿದ್ದು, ಲಭ್ಯವಿರುವ ಅನುದಾನವನ್ನು ಸರಿಯಾಗಿ ಅಭಿವೃದ್ಧಿ ಕೆಲಸಗಳಿಗೆ ಉಪಯೋಗಿಸಬೇಕೆಂದು ಅಧಿಕಾರಿಗಳಿಗೆ ಸೂಚಿಸಿದರು.

ಸರ್ಕಾರ ನೀಡಿದ ಅನುದಾನವನ್ನು ಅಧಿಕಾರಿಗಳು ನಿಗದಿತ ಸಮಯದಲ್ಲಿ ಸದುಪಯೋಗ ಮಾಡಿಕೊಳ್ಳದಿದ್ದರೆ ಅನುದಾನ ಹಿಂದಿರುಗಿ ಹೊಗುತ್ತದೆ. ಸ್ಥಳೀಯ ಸಂಸ್ಥೆಗಳು ಅನುದಾನಕ್ಕಾಗಿ ರಾಜ್ಯ ಮತ್ತು ಕೇಂದ್ರ ಸರ್ಕಾರದ ಮೇಲೆ ಅವಲಂಬಿತರಾಗದೆ, ಬುದ್ಧಿವಂತಿಕೆಯಿಂದ ಸ್ಥಳೀಯ ಮಟ್ಟದಲ್ಲಿ ಆದಾಯ ಮೂಲಗಳನ್ನು ಸೃಷ್ಟಿಸಿಕೊಳ್ಳಬೇಕೆಂದು ಸೂಚಿಸಿದರು.

ಸಭೆಯಲ್ಲಿ ಜನಪ್ರತಿನಿಧಿಗಳು ಮತ್ತು ಅಧಿಕಾರಿಗಳು ನೀಡಿದ ಅಗತ್ಯ ಸಲಹೆ ಸೂಚನೆಗಳನ್ನು ಪರಿಗಣಿಸಲಾಗುವುದು ಎಂದು ಹೇಳಿದರು.

ಶ್ರೀ ಬೀರಲಿಂಗೇಶ್ವರ ದೇವಾಲಯ ಆವರಣದಲ್ಲಿ ಇಷ್ಟಲಿಂಗ ಮಹಾಪೂಜಾ

ಇಷ್ಟಲಿಂಗ ಪೂಜೆಯಿಂದ ಅನಿಷ್ಟಗಳು ದೂರ

■ ವಿಜಯಸಾಕ್ಷಿ ಸುದ್ದಿ, ಹರಿಹರ

ಶಿವಶಕ್ತಿಯಿಂದ ಈ ಜಗತ್ತು ನಿರ್ಮಾಣಗೊಂಡಿದೆ. ಶಿವನ ಬಿಟ್ಟು ಶಕ್ತಿ, ಶಕ್ತಿಯನ್ನು ಬಿಟ್ಟು ಶಿವನಿಲ್ಲ. ಇಷ್ಟಲಿಂಗಾರ್ಚನೆಯಿಂದ ಅನಿಷ್ಟಗಳು ದೂರವಾಗಿ ಇಷ್ಟಾರ್ಥಗಳು ಪ್ರಾಪ್ತವಾಗುತ್ತವೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ತಾಲೂಕಿನ ಮಲೇಬೆನ್ನೂರು ಶ್ರೀ ಬೀರಲಿಂಗೇಶ್ವರ ದೇವಾಲಯ ಆವರಣದಲ್ಲಿ ಇಷ್ಟಲಿಂಗ ಮಹಾಪೂಜಾ ನೆರವೇರಿಸಿ, ನಂತರ ನಡೆದ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಜೀವಾತ್ಮ ಪರಮಾತ್ಮನ ಕಿರಣ. ಶಿವನಿಂದ ಭಿನ್ನನಾದ ಜೀವಾತ್ಮ